ಶುಕ್ರವಾರ,20.02.2026
ಬೆಂಗಳೂರು, ಬೆಲೆ: 5ರೂ.,2 ಪುಟಗಳು
ಸಂಪುಟ 01 – ಸಂಚಿಕೆ 148

Digital Varthe Kannada Daily
Volume 01 - Issue 148
Friday, 20.02.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

## ತಲೆಗೆ ಹೊಡೆದು ವೃದ್ಧ ಮಹಿಳೆಯ ಕೊಲೆ





**ನೆಲಮಂಗಲ:** ನೀರು ಕೇಳುವ ನೆಪದಲ್ಲಿ ಮನೆಗೆ ನುಗ್ಗಿದ ದುಷ್ಕರ್ಮಿಯೊಬ್ಬ ವ್ಹೀಲ್ ಚೇರ್‌ನಲ್ಲಿ ಅಸಹಾಯಕ ಸ್ಥಿತಿಯಲ್ಲಿ ಇದ್ದ ವೃದ್ಧ ಪತಿಯ ಎದುರೇ ಮಹಿಳೆಯ ಕತ್ತು ಸೀಳಿ ಬರ್ಬರವಾಗಿ ಹತ್ಯೆ ಮಾಡಿ, ಆಕೆಯ ಮೈಮೇಲಿದ್ದ ಚಿನ್ನಾಭರಣ ದೋಚಿಕೊಂಡು ಪರಾರಿಯಾದ ಆಘಾತಕಾರಿ ಘಟನೆ ನೆಲಮಂಗಲ ನಗರದ ಪೇಟೆ ಬೀದಿಯಲ್ಲಿ ನಡೆದಿದೆ. ಮೃತರನ್ನು ಶೋಭಾ (60) ಎಂದು ಗುರುತಿಸಲಾಗಿದ್ದು, ಆರೋಪಿಯ ಪತ್ತೆಗೆ ಪೊಲೀಸರು ಶೋಧ ಕಾರ್ಯ ಮುಂದುವ–ರಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಚಿನ್ನಾಭರಣ ದರೋಡೆ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆ, ಇದೀಗ ಅದೇ ಉದ್ದೇಶದಿಂದ ನಡೆದಿರುವ ಕೊಲೆ ಸ್ಥಳೀಯರಲ್ಲಿ ಭೀತಿಯನ್ನುಂಟು ಮಾಡಿದೆ.

**ಪತಿಯೊಂದಿಗೆ ವಾಸಿಸುತ್ತಿದ್ದ ಮಹಿಳೆ:** ಶೋಭಾ ತಮ್ಮ ಪತಿಯೊಂದಿಗೆ ಪೇಟೆ ಬೀದಿಯಲ್ಲಿ ವಾಸವಾಗಿದ್ದು, ದಂಪತಿಗೆ ಮಕ್ಕಳಿರಲಿಲ್ಲ. ಸುಮಾರು 12 ವರ್ಷಗಳ ಹಿಂದೆ ಬ್ರೈನ್ ಸ್ಟ್ರೋಕ್‌ಗೆ ಒಳಗಾದ ಪತಿ ಹಾಸಿಗೆ ಹಿಡಿದಿದ್ದರಿಂದ, ಅವರ ಆರೈಕೆ ಹಾಗೂ ಮನೆಯ ಜವಾಬ್ದಾರಿ ಸಂಪೂರ್ಣವಾಗಿ ಶೋಭಾ ಮೇಲಿದೆ. ಅನಾರೋಗ್ಯ ಪೀಡಿತ ಪತಿಯನ್ನು ಮಗುವಿನಂತೆ ನೋಡಿಕೊಳ್ಳುತ್ತಿದ್ದ ಶೋಭಾ, ನೆರೆಹೊರೆಯವರೊಂದಿಗೆ ಸಹ ಸೌಹಾರ್ದತೆಯಿಂದ ಬದುಕುತ್ತಿದ್ದರೆಂದು ತಿಳಿದುಬಂದಿದೆ.

ಇವರು ಶ್ರೀಮಂತ ಕುಟುಂಬದವರಾಗಿದ್ದು, ಶೋಭಾಳ ಪತಿಗೆ ಪ್ರತಿದಿನ ಫಿಸಿಯೋಥೆರಪಿ ನೀಡಲು ವೈದ್ಯರು ಮನೆಗೆ ಬರುತ್ತಿದ್ದರು. ಎಂದಿನಂತೆ ನಿನ್ನೆ ಕೂಡ ವೈದ್ಯರು ಮನೆಗೆ ಭೇಟಿ ನೀಡಿದ ವೇಳೆ ಈ ದುರ್ಘಟನೆ ಬೆಳಕಿಗೆ ಬಂದಿರುವುದಾಗಿ ತಿಳಿದುಬಂದಿದೆ.

**ನೀರು ಕೇಳುವ ನೆಪದಲ್ಲಿ ನುಗ್ಗಿದ ದುಷ್ಕರ್ಮಿ:** ಮಾಹಿತಿಯ ಪ್ರಕಾರ, ಮಧ್ಯಾಹ್ನ ಸುಮಾರು 4 ಗಂಟೆ ಸುಮಾರಿಗೆ ಶೋಭಾ ಪೇಟೆ ಬೀದಿಯಿಂದ ಮನೆಗೆ ಮರಳುತ್ತಿದ್ದ ವೇಳೆ ದುಷ್ಕರ್ಮಿಯೊಬ್ಬ ಆಕೆಯನ್ನು ಹಿಂಬಾಲಿಸಿದ್ದಾನೆ. ಶೋಭಾಳ ಮೈಮೇಲಿದ್ದ ಸುಮಾರು 100 ಗ್ರಾಂಗಳಿಗೂ ಹೆಚ್ಚು ತೂಕದ ಚಿನ್ನಾಭರಣವನ್ನು ಗಮನಿಸಿದ ಆತ, ನೀರು ಕೇಳುವ ನೆಪದಲ್ಲಿ ಮನೆಗೆ ಪ್ರವೇಶಿಸಿದ್ದಾನೆ.

ಮನೆಯೊಳಗೆ ಪ್ರವೇಶಿಸಿದ ನಂತರ ತನ್ನ ಬಳಿಯಿದ್ದ ಚಾಕುವಿನಿಂದ ಶೋಭಾಳ ಕತ್ತು ಸೀಳಿದ್ದಾನೆ. ದಾಳಿಯಿಂದ ತಪ್ಪಿಸಿಕೊಳ್ಳಲು ಮಹಿಳೆ ಪ್ರಯತ್ನಿಸಿದರೂ ಸಾಧ್ಯವಾಗದೇ, ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾಳೆ. ಘಟನೆ ನಡೆಯುವ ವೇಳೆ ವ್ಹೀಲ್‌ಚೇರ್‌ನಲ್ಲಿದ್ದ ಪತಿ ಅಸಹಾಯಕವಾಗಿ ನೋಡುತ್ತಿದ್ದರೆಂಬುದು ಪ್ರಕರಣದ ಕ್ರೂರತೆಯನ್ನು ಮತ್ತಷ್ಟು ಹೆಚ್ಚಿಸಿದೆ.

**ಚಿನ್ನಾಭರಣ ದೋಚಿ ಪರಾರಿ:**ಹತ್ಯೆ ಬಳಿಕ ಶೋಭಾಳ ಮೈಮೇಲಿದ್ದ ಚಿನ್ನಾಭರಣವನ್ನು ದೋಚಿಕೊಂಡು ದುಷ್ಕರ್ಮಿ ಪರಾರಿಯಾಗಿದ್ದಾನೆ. ಘಟನೆಯ ಮಾಹಿತಿ ತಿಳಿದ ತಕ್ಷಣ ನೆಲಮಂಗಲ ಟೌನ್ ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿದ್ದಾರೆ. ಹಿರಿಯ ಪೊಲೀಸ್ ಅಧಿಕಾರಿಗಳೂ ಭೇಟಿ ನೀಡಿ ಘಟನಾ ಸ್ಥಳದ ಪರಿಶೀಲನೆ ನಡೆಸಿದ್ದಾರೆ.

ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ ಆರೋಪಿಯ ಪತ್ತೆಗೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ.

ಈ ಘಟನೆ ಸ್ಥಳೀಯರಲ್ಲಿ ಆತಂಕ ಮೂಡಿಸಿದ್ದು, ಹಿರಿಯ ನಾಗರಿಕರ ಸುರಕ್ಷತೆ ಕು–ರಿತು ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿದೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಎಲ್ಲ ಆಯಾಮಗಳಲ್ಲಿ ತನಿಖೆ ಮುಂದುವರಿಸಿದ್ದಾರೆ.

## ಕೆಲಸಕ್ಕೆ ಹೋಗಿದ್ದ ಯುವಕ ಅನುಮಾನಾಸ್ಪದ ಸಾವು



**ಹಾಸನ:** ಫ್ಯಾಕ್ಟರಿ ಕೆಲಸಕ್ಕೆ ತೆರಳಿದ್ದ ಯುವಕ ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ಹಾಸನ ಹೊರವಲಯದ ಹನುಮಂತಪುರ ಸಮೀಪದ ಕಾರ್ಖಾನೆಯಲ್ಲಿ ನಡೆದಿದೆ. ಮೃತ ಯುವಕನನ್ನು ಪುನೀತ್ (27) ಎಂದು ಗುರುತಿಸಲಾಗಿದ್ದು, ಘಟನೆ ಸ್ಥಳೀಯರಲ್ಲಿ ಆತಂಕ ಮತ್ತು ಅನುಮಾನಕ್ಕೆ ಕಾರಣವಾಗಿದೆ.

ಪುನೀತ್ ಕಳೆದ ಆರು ತಿಂಗಳಿನಿಂದ ಕಾರ್ಖಾನೆಯಲ್ಲಿ ಎಲೆಕ್ಟ್ರಿಷಿಯನ್ ಆಗಿ ಕೆಲಸ ಮಾಡುತ್ತಿದ್ದನು. ಬುಧವಾರ ಬೆಳಿಗ್ಗೆ ಎಂದಿನಂತೆ ಸಮವಸ್ತ್ರ ಧರಿಸಿ ಕೆಲಸಕ್ಕೆ ತೆರಳಿದ್ದ ಆತ, ಮಧ್ಯಾಹ್ನದ ವೇಳೆಗೆ ಕಾರ್ಖಾನೆಯ ನೀರಿನ ಸಂಪ್‌ನಲ್ಲಿ ನಿಂತ ಸ್ಥಿತಿಯಲ್ಲಿ ಮೃತದೇಹವಾಗಿ ಪತ್ತೆಯಾಗಿದ್ದಾನೆ ಎಂದು ತಿಳಿದುಬಂದಿದೆ.

**ಶವಾಗಾರಕ್ಕೆ ಮೃತದೇಹ ರವಾನೆ:** ಘಟನೆ ಬಳಿಕ ಪುನೀತ್ ಮೃತದೇಹವನ್ನು ಜಿಲ್ಲಾಸ್ಪತ್ರೆಯ ಶವಾಗಾರಕ್ಕೆ ತರಲಾಗಿದ್ದು, ಪೊಲೀಸರು ಕುಟುಂಬಸ್ಥರಿಗೆ ಮಾಹಿತಿ ನೀಡಿದ್ದಾರೆ. ವಿಷಯ ತಿಳಿದ ತಕ್ಷಣ ಶವಾಗಾರದ ಬಳಿ ಕುಟುಂಬಸ್ಥರು, ಬಂಧುಗಳು ಹಾಗೂ ಸ್ನೇಹಿತರು ಸೇರಿ ನೂರಾರು ಮಂದಿ ಜಮಾಯಿಸಿ ದುಃಖ ವ್ಯಕ್ತಪಡಿಸಿದರು.

ಕುಟುಂಬಸ್ಥರು ಕಾರ್ಖಾನೆ ಮೇಲಾಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಮಧ್ಯಾಹ್ನವೇ ಮೃತದೇಹ ಪತ್ತೆಯಾಗಿದ್ದರೂ ತಕ್ಷಣ ಮಾಹಿತಿ ನೀಡಿಲ್ಲ ಎಂದು ಆರೋಪಿಸಿದ್ದಾರೆ. ಬೆಳಿಗ್ಗೆ ಸಮವಸ್ತ್ರದಲ್ಲೇ ಕೆಲಸಕ್ಕೆ ತೆರಳಿದ್ದ ಪುನೀತ್ ಮೃತಪಟ್ಟ ಬಳಿಕ ಸಮವಸ್ತ್ರ ಬದಲಿಸಲಾಗಿದೆ ಎಂಬ ಶಂಕೆಯನ್ನೂ ವ್ಯಕ್ತಪಡಿಸಿದ್ದಾರೆ.

**ಕೊಲೆ ಶಂಕೆ ವ್ಯಕ್ತಪಡಿಸಿದ ಕುಟುಂಬ:** ಪುನೀತ್ ಸಾವನ್ನು ಸಹಜ ಸಾವು ಎಂದು ಒಪ್ಪಿಕೊಳ್ಳಲು ಸಾಧ್ಯವಿಲ್ಲ, ಇದು ಕೊಲೆ ಪ್ರಕರಣವಾಗಿರಬಹುದು ಎಂದು ಕುಟುಂಬಸ್ಥರು ಹಾಗೂ ಸ್ನೇಹಿತರು ಆರೋಪಿಸಿದ್ದಾರೆ. ಕಾರ್ಖಾನೆಯಲ್ಲಿ ಶೇ.80ಕ್ಕೂ ಹೆಚ್ಚು ಹೊರರಾಜ್ಯದ ಕಾರ್ಮಿಕರು ಕೆಲಸ ಮಾಡುತ್ತಿರುವುದರಿಂದ, ಪದೇ ಪದೇ ಸಂಭವಿಸುತ್ತಿರುವ ಸಾವುಗಳನ್ನು ಮುಚ್ಚಿಹಾಕುವ ಪ್ರಯತ್ನ ನಡೆದಿದೆ ಎಂಬ ಗಂಭೀರ ಆರೋಪಗಳೂ ಕೇಳಿಬಂದಿವೆ. ಪುನೀತ್ ಸ್ಥಳೀಯ ಯುವಕನಾಗಿರುವುದ–ರಿಂದ ಪ್ರಕರಣವನ್ನು ಮುಚ್ಚಿಹಾಕಲು ಸಾಧ್ಯವಾಗದೆ ಈಗ ನಾಟಕವಾಡಲಾಗುತ್ತಿದೆ ಎಂದು ಕುಟುಂಬಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಸಮಗ್ರ ತನಿಖೆಗೆ ಆಗ್ರಹ:** ಕಾರ್ಖಾನೆಯಲ್ಲಿ ನಡೆದ ಘಟನೆ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಕುಟುಂಬಸ್ಥರು ಒತ್ತಾಯಿಸಿದ್ದಾರೆ. ಪುನೀತ್ ಕಳೆದ ವಾರವೇ ಪಾದಯಾತ್ರೆಯ ಮೂಲಕ ಧರ್ಮಸ್ಥಳಕ್ಕೆ ತೆರಳಿ ಮಂಜುನಾಥ ಸ್ವಾಮಿಯ ದರ್ಶನ ಪಡೆದು ಫೆಬ್ರವರಿ 15ರಂದು ಗ್ರಾಮಕ್ಕೆ ಮರಳಿದ್ದನು. ಯಾವುದೇ ದುಶ್ಚಟಗಳಿಲ್ಲದೆ ಶಾಂತ ಸ್ವಭಾವದ ಯುವಕನಾಗಿದ್ದ ಆತ ಏಕೈಕ ಮಗನಾಗಿದ್ದ ಕಾರಣ ಕುಟುಂಬ ದುಃಖದಲ್ಲಿ ಮುಳುಗಿದೆ.

ಪೋಷಕರು ಒಬ್ಬನೇ ಮಗನನ್ನು ಕಳೆದುಕೊಂಡು ಆಕ್ರಂದನ ವ್ಯಕ್ತಪಡಿಸುತ್ತಿದ್ದು, ಗ್ರಾಮದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ. ಘಟನೆ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಹಾಸನ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಮೈಸೂರಿನಲ್ಲಿ ಹೀಲಿಯಂ ಗ್ಯಾಸ್ ಬಲೂನ್ ನಿಷೇಧ..!



**ಮೈಸೂರು:** ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಇತ್ತೀಚೆಗೆ ನಡೆದ ಹೀಲಿಯಂ ಅನಿಲ ಸ್ಫೋಟದ ಘಟನೆ ಸಾರ್ವಜನಿಕರಲ್ಲಿ ಭಾರೀ ಆತಂಕ ಮೂಡಿಸಿದ್ದ ಹಿನ್ನೆಲೆಯಲ್ಲಿ, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅವರು ಮಹತ್ವದ ಆದೇಶ ಹೊರಡಿಸಿದ್ದಾರೆ. ಮೈಸೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಹೀಲಿಯಂ ಅನಿಲದ ಬಳಕೆ ಹಾಗೂ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಿ ಅಧಿಕೃತ ಸೂಚನೆ ನೀಡಲಾಗಿದೆ.

ಮೈಸೂರು ಅರಮನೆ ಮುಂಭಾಗದಂತಹ ಜನಸಂದಣಿ ಹೆಚ್ಚಿರುವ ಪ್ರವಾಸಿ ತಾಣದ ಬಳಿ ನಡೆದ ಸ್ಫೋಟವು ಸಾರ್ವಜನಿಕ ಸುರಕ್ಷತೆಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿತ್ತು. ಈ ಘಟನೆ ಜನರ ಜೀವಕ್ಕೆ ಅಪಾಯ ಉಂಟುಮಾಡುವ ಸಾಧ್ಯತೆ ಇರುವುದನ್ನು ಮನಗಂಡು, ಮುನ್ನೆಚ್ಚರಿಕಾ ಕ್ರಮವಾಗಿ ಈ ನಿರ್ಬಂಧ ಜಾ–ರಿಗೊಳಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**ಸ್ಫೋಟದ ಅಪಾಯದ ಹಿನ್ನೆಲೆ:** ಹೀಲಿಯಂ ಅನಿಲವನ್ನು ಸಾಮಾನ್ಯವಾಗಿ ಬಲೂನ್‌ಗಳಿಗೆ ತುಂಬಲು ಬಳಸಲಾಗುತ್ತದೆ. ಆದರೆ ಈ ಅನಿಲವನ್ನು ಹೆಚ್ಚಿನ ಒತ್ತಡದಲ್ಲಿ ಸಿಲಿಂಡರ್‌ಗಳಲ್ಲಿ ಸಂಗ್ರಹಿಸಲಾಗುವುದರಿಂದ ಅಜಾಗರೂಕತೆ ಅಥವಾ ತಾಂತ್ರಿಕ ದೋಷಗಳಿಂದ ಸಿಲಿಂಡರ್‌ಗಳು ಸ್ಫೋಟಗೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ. ಸ್ಫೋಟ ಸಂಭವಿಸಿದರೆ ಅದು ಆಸ್ತಿಪಾಸ್ತಿಗೆ ಮಾತ್ರವಲ್ಲದೆ, ಸುತ್ತಮುತ್ತಲಿನ ಜನರ ಜೀವಕ್ಕೂ ಅಪಾಯ ಉಂಟುಮಾಡಬಹುದು.

ಮೈಸೂರು ಅರಮನೆ ಮುಂಭಾಗ ನಡೆದ ಘಟನೆಯು ಸಾರ್ವಜನಿಕ ಶಾಂತಿ ಮತ್ತು ಭದ್ರತೆಗೆ ಧಕ್ಕೆಯಾಗಿರುವುದನ್ನು ಗಮನಿಸಿ, ಹೀಲಿಯಂ ಅನಿಲ ಬಳಕೆಯನ್ನು ನಿಯಂತ್ರಿಸುವ ಅಗತ್ಯತೆ ಎದುರಾಯಿತು ಎಂದು ಪೊಲೀಸ್ ಇಲಾಖೆ ಸ್ಪಷ್ಟಪಡಿಸಿದೆ.

**ನಿಷೇಧ ಜಾರಿಯಾದ ಸ್ಥಳಗಳು:** ಪೊಲೀಸ್ ಆಯುಕ್ತರ ಆದೇಶದಂತೆ ಮೈಸೂರು ನಗರ ವ್ಯಾಪ್ತಿಯ ಹಲವು ಪ್ರಮುಖ ಪ್ರದೇಶಗಳಲ್ಲಿ ಹೀಲಿಯಂ ಅನಿಲ ಬಳಸಿ ಬಲೂನ್ ಹಾರಿಸುವುದು ಅಥವಾ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಅವುಗಳಲ್ಲಿ:

**ಸಾರ್ವಜನಿಕ ಸ್ಥಳಗಳು ಮತ್ತು ರಸ್ತೆ ಪ್ರದೇಶಗಳು:**

**ಪ್ರಮುಖ ಪ್ರವಾಸಿ ತಾಣಗಳು (ಮೈಸೂರು ಅರಮನೆ, ಮೃಗಾಲಯ, ಚಾಮುಂಡಿ ಬೆಟ್ಟ ಸೇರಿದಂತೆ)**

**ಹಬ್ಬಗಳು, ಜಾತ್ರೆಗಳು ಹಾಗೂ ಉತ್ಸವಗಳು ನಡೆಯುವ ಪ್ರದೇಶಗಳು**

**ಸಾರ್ವಜನಿಕ ಸಮಾರಂಭಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು**

**ಹೆಚ್ಚು ಜನಸಂದಣಿ ಇರುವ ಮಾರುಕಟ್ಟೆ ಹಾಗೂ ವ್ಯಾಪಾರಿಕ ಪ್ರದೇಶಗಳು**

**ಈ ಪ್ರದೇಶಗಳಲ್ಲಿ ನಿಯಮ ಉಲ್ಲಂಘನೆ ಕಂಡುಬಂದರೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಲಾಗಿದೆ.**

**ಆರೋಗ್ಯ ಮತ್ತು ಸುರಕ್ಷತಾ ಅಪಾಯ:** ಹೀಲಿಯಂ ಅನಿಲವು ಸ್ಫೋಟದ ಅಪಾಯ ಹೊಂದಿರುವುದರ ಜೊತೆಗೆ, ಮುಚ್ಚಿದ ಸ್ಥಳಗಳಲ್ಲಿ ಉಸಿರುಗಟ್ಟುವಿಕೆಗೆ ಕಾರಣವಾಗುವ ಸಾಧ್ಯತೆಯೂ ಇದೆ. ವಿಶೇಷವಾಗಿ ಮಕ್ಕಳ ಆಟಿಕೆಯಾಗಿ ಬಳಸುವ ಬಲೂನ್‌ಗಳಲ್ಲಿ ಇಂತಹ ಅನಿಲ ಬಳಕೆಯು ಪೋಷಕರಲ್ಲಿ ಆತಂಕ ಮೂಡಿಸಿತ್ತು. ಸಣ್ಣ ತಪ್ಪು ಸಹ ದೊಡ್ಡ ಅಪಘಾತಕ್ಕೆ ಕಾರಣವಾಗುವ ಸಾಧ್ಯತೆ ಇರುವುದರಿಂದ ಮುನ್ನೆಚ್ಚರಿಕಾ ಕ್ರಮ ಅಗತ್ಯವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಸಾರ್ವಜನಿಕ ಸುರಕ್ಷತೆಗೆ ಆದ್ಯತೆ:** ಮೈಸೂರು ಪೊಲೀಸರ ಈ ನಿರ್ಧಾರಕ್ಕೆ ಸ್ಥಳೀಯ ನಿವಾಸಿಗಳು ಹಾಗೂ ಪ್ರವಾಸಿಗರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಸಾರ್ವಜನಿಕರ ಜೀವ ರಕ್ಷಣೆ ಮತ್ತು ಪ್ರವಾಸಿ ತಾಣಗಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ತೆಗೆದುಕೊಂಡ ಈ ಕ್ರಮವು ಅನಿವಾರ್ಯವಾಗಿತ್ತು ಎಂದು ಪೊಲೀಸ್ ಇಲಾಖೆ ಹೇಳಿದೆ.

ನಿಯಮ ಉಲ್ಲಂಘಿಸುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಆಯುಕ್ತ ಸೀಮಾ ಲಾಟ್ಕರ್ ಎಚ್ಚರಿಕೆ ನೀಡಿದ್ದು, ನಗರದಲ್ಲಿ ಸುರಕ್ಷತಾ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ವ್ಯಾಪಾರಿಗಳು ಮತ್ತು ಸಾರ್ವಜನಿಕರಿಗೆ ಸೂಚಿಸಲಾಗಿದೆ.

## ಉಚಿತ ಬಸ್‌ಗೆ ಹಣವಿದ್ದರೆ, ಪರಿಹಾರಕ್ಕೆ ಏಕೆ ಇಲ್ಲ ?

### ಹೈಕೋರ್ಟ್‌ನ ತರಾಟೆಗೆ ತತ್ತರಿಸಿದ ಸಾರಿಗೆ ನಿಗಮ



**ಬೆಂಗಳೂರು:** ಕೋವಿಡ್–19 ಸಾಂಕ್ರಾಮಿಕದ ಅವಧಿಯಲ್ಲಿ ಜೀವದ ಹಂಗು ತೊರೆದು ಕರ್ತವ್ಯ ನಿರ್ವಹಿಸಿ ಮೃತಪಟ್ಟ ಸಾರಿಗೆ ಸಿಬ್ಬಂದಿಯ ಕುಟುಂಬಗಳಿಗೆ ಇನ್ನೂ ಪರಿಹಾರ ದೊರಕದಿರುವುದು ಗಂಭೀರ ವಿಷಯ ಎಂದು ಕರ್ನಾಟಕ ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಈ ಸಂಬಂಧ ವಿಚಾರಣೆ ನಡೆಸುತ್ತಿರುವ ನ್ಯಾಯಾಲಯ, ಪರಿಹಾರ ನೀಡಲು ಹಣದ ಕೊರತೆ ಇದೆ ಎಂಬ ಸಾರಿಗೆ ನಿಗಮಗಳ ವಾದವನ್ನು ತೀವ್ರವಾಗಿ ಪ್ರಶ್ನಿಸಿ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಶಕ್ತಿ ಯೋಜನೆಯಡಿ ನಿಗಮಗಳಿಗೆ ಬಾಕಿ ಇರುವ ಹಣದ ಸಂಪೂರ್ಣ ವಿವರಗಳನ್ನು ಸಲ್ಲಿಸಲು ಖಡಕ್ ಸೂಚನೆ ನೀಡಿದೆ.

**ಪ್ರಕರಣದ ಹಿನ್ನೆಲೆ:** ದಾವಣಗೆರೆಯ ತಾಹೀರ್ ಹುಸೇನ್ ಹಾಗೂ ರಾಯಚೂರಿನ ಅಜೀಜ್ ಪಾಷಾ ಜಾಗೀರದಾರ್ ಅವರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ಹೈಕೋರ್ಟ್‌ನಲ್ಲಿ ನಡೆಯುತ್ತಿದೆ. ಕೋವಿಡ್ ಮಹಾಮಾರಿಯ ಸಮಯದಲ್ಲಿ ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಉತ್ತರ ಪಶ್ಚಿಮ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಸೇರಿ ನಾಲ್ಕು ಸಾರಿಗೆ ನಿಗಮಗಳ ಸಿಬ್ಬಂದಿ ಸೋಂಕಿನಿಂದ ಮೃತಪಟ್ಟಿದ್ದರು. ಮೃತರ ಕುಟುಂಬಗಳಿಗೆ ತಲಾ 30 ಲಕ್ಷ ರೂಪಾಯಿ ಪರಿಹಾರ ನೀಡಬೇಕೆಂದು ಅರ್ಜಿದಾರರು ಮನವಿ ಮಾಡಿದ್ದಾರೆ.

**ನಿಗಮಗಳ ಆರ್ಥಿಕ ಅಸಹಾಯಕತೆ:** ವಿಚಾರಣೆ ವೇಳೆ ಸಾರಿಗೆ ನಿಗಮಗಳ ಪರ ವಕೀಲರು, ನಿಗಮಗಳು ಈಗಾಗಲೇ ತೀವ್ರ ಆರ್ಥಿಕ ಸಂಕಷ್ಟದಲ್ಲಿದ್ದು ಭಾರೀ ನಷ್ಟ ಅನುಭವಿಸುತ್ತಿವೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು. ಸಿಬ್ಬಂದಿಗೆ ಮಾಸಿಕ ವೇತನ ಪಾವತಿಸುವುದೇ ಸವಾಲಾಗಿರುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೋವಿಡ್ ಅವಧಿಯಲ್ಲಿ ಸರ್ಕಾರ ನೀಡಿದ ಅನುದಾನದ ನೆರವಿನಿಂದ ವೇತನ ಪಾವತಿಸಲಾಗಿತ್ತು. ಆದರೆ ಪ್ರಸ್ತುತ ಮೃತರ ಕುಟುಂಬಗಳಿಗೆ ಪರಿಹಾರ ನೀಡಲು ಅಗತ್ಯವಾದ ಆರ್ಥಿಕ ಸಂಪನ್ಮೂಲಗಳ ಕೊರತೆಯಿದೆ ಎಂದು ಅವರು ವಾದಿಸಿದರು.

ಸರ್ಕಾರ ಪರಿಹಾರ ನೀಡುವ ಕುರಿತು ಆದೇಶ ಹೊರಡಿಸಿದ್ದರೂ, ಹಣಕಾಸಿನ ಅಭಾವದಿಂದ ಅದನ್ನು ಜಾರಿಗೆ ತರುವ ಸಾಧ್ಯತೆ ಇಲ್ಲ ಎಂದು ನಿಗಮಗಳು ನ್ಯಾಯಾಲಯದ ಗಮನಕ್ಕೆ ತಂದವು.

**ಹೈಕೋರ್ಟ್‌ನ ತೀಕ್ಷ್ಣ ಪ್ರಶ್ನೆಗಳು:** ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ನೇತೃತ್ವದ ವಿಭಾಗೀಯ ಪೀಠವು ನಿಗಮಗಳ ಈ ವಾದಕ್ಕೆ ತೀಕ್ಷ್ಣ ಪ್ರತಿಕ್ರಿಯೆ ನೀಡಿತು. ಸಂಪನ್ಮೂಲಗಳ ಕೊರತೆ ಇದೆ ಎಂದು ಹೇಳುತ್ತಿದ್ದೀರಿ, ಆದರೆ ಶಕ್ತಿ ಯೋಜನೆಯಡಿ ಲಕ್ಷಾಂತರ ಮಹಿಳೆಯರಿಗೆ ಉಚಿತ ಸಾರಿಗೆ ಸೇವೆ ನೀಡಲಾಗುತ್ತಿದೆ. ಉಚಿತ ಟಿಕೆಟ್ ನೀಡಿದ ನಂತರ ಸರ್ಕಾರ ನಿಗಮಗಳಿಗೆ ಹಣ ಮರುಪಾವತಿಸಬೇಕಲ್ಲವೇ? ಆ ಯೋಜನೆ ಹೇಗೆ ನಿರ್ವಹಣೆಯಾಗುತ್ತಿದೆ ಎಂದು ಪೀಠ ಪ್ರಶ್ನೆ ಮಾಡಿತು.

ಇದಲ್ಲದೆ, ಸರ್ಕಾರ ಶಕ್ತಿ ಯೋಜನೆಯಡಿ ಇದುವರೆಗೆ ಎಷ್ಟು ಹಣ ಬಿಡುಗಡೆ ಮಾಡಿದೆ ಮತ್ತು ನಿಗಮಗಳಿಗೆ ಇನ್ನೂ ಎಷ್ಟು ಮೊತ್ತ ಬಾಕಿ ಉಳಿದಿದೆ ಎಂಬುದರ ಬಗ್ಗೆ ಸ್ಪಷ್ಟ ಮಾಹಿತಿ ನೀಡುವಂತೆ ನ್ಯಾಯಾಲಯ ಸೂಚಿಸಿದೆ. ಶಕ್ತಿ ಯೋಜನೆಯಡಿ ಸರ್ಕಾರ ನೀಡಬೇಕಾದ ಬಾಕಿ ಹಣವು ನಿಗಮಗಳ ಆರ್ಥಿಕ ಸಂಪನ್ಮೂಲವೇ ಆಗಿದ್ದು, ಅದನ್ನು ಬಳಸಿಕೊಂಡು ಕೋವಿಡ್‌ನಿಂದ ಮೃತಪಟ್ಟ ಸಿಬ್ಬಂದಿಯ ಕುಟುಂಬಗಳಿಗೆ ಪರಿಹಾರ ನೀಡಲು ಏಕೆ ಸಾಧ್ಯವಾಗುತ್ತಿಲ್ಲ ಎಂಬ ಪ್ರಶ್ನೆಯನ್ನೂ ಪೀಠ ಎತ್ತಿದೆ.

**ನ್ಯಾಯಾಲಯದ ನಿರ್ದೇಶನ:** ವಿಚಾರಣೆ ಅಂತ್ಯದಲ್ಲಿ ಹೈಕೋರ್ಟ್ ಸಾರಿಗೆ ನಿಗಮಗಳಿಗೆ ಕೆಲವು ಪ್ರಮುಖ ಮಾಹಿತಿಗಳನ್ನು ಸಲ್ಲಿಸಲು ಆದ–ೇಶಿಸಿದೆ:

**ಶಕ್ತಿ ಯೋಜನೆಯಡಿ ಸರ್ಕಾರದಿಂದ ನಿಗಮಗಳಿಗೆ ಬರಬೇಕಾದ ಒಟ್ಟು ಬಾಕಿ ಮೊತ್ತದ ವಿವರ:** ಕೋವಿಡ್ ಅವಧಿಯಲ್ಲಿ ಮೃತಪಟ್ಟ ಸಿಬ್ಬಂದಿಗೆ ಪರಿಹಾರ ನೀಡಲು ಸರ್ಕಾರ ರೂಪಿಸಿರುವ ಯೋಜನೆಗಳು ಮತ್ತು ಸಂಬಂಧಿತ ದಾಖಲೆಗಳು

ಈ ಮಾಹಿತಿಯನ್ನು ಸಲ್ಲಿಸಿದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದಾಗಿ ತಿಳಿಸಿದ ನ್ಯಾಯಾಲಯ, ಪ್ರಕರಣದ ಮುಂದಿನ ವಿಚಾರಣೆಯನ್ನು ಮಾರ್ಚ್ 23ಕ್ಕೆ ಮುಂದೂಡಿದೆ.

ತ ಕೋವಿಡ್ ಸಮಯದಲ್ಲಿ ಸೇವೆ ಸಲ್ಲಿಸಿ ಪ್ರಾಣ ಕಳೆದುಕೊಂಡ ಸಾರಿಗೆ ಸಿಬ್ಬಂದಿಯ ಕುಟುಂಬಗಳಿಗೆ ನ್ಯಾಯ ಒದಗಿಸಬೇಕೆಂಬ ಒತ್ತಡ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಈ ವಿಚಾರಣೆ ಸರ್ಕಾರ ಮತ್ತು ಸಾರಿಗೆ ನಿಗಮಗಳ ಹಣಕಾಸು ಸ್ಥಿತಿಗೆ ಸಂಬಂಧಿಸಿದ ಪ್ರಮುಖ ಬೆಳವಣಿಗೆಗಳಿಗೆ ದಾರಿ ಮಾಡಿಕೊಡುವ ಸಾಧ್ಯತೆ ಇದೆ.

## ತಹಶೀಲ್ದಾರ್ ಗಗನ ಸಿಂಧೂ ಕಾರ್ಯಕ್ಕೆ ಜನ ಮೆಚ್ಚುಗೆ..



ಶಿಡ್ಲಘಟ್ಟದ ಒಬ್ಬ ವಯೋ ೀವೃದ್ಧೆ ಮಹಿಳೆ ತಹಶೀಲ್ದಾರ್ ಕಚೇರಿಯ ಗೇಟ್ ಬಳಿ ಒಬ್ಬಳೇ ಬೆಳಿಗ್ಗೆ ಬಂದು ಸಾಯಕಾಲದ ವರೆಗೂ ಕುಳಿತು ಹೊಗುವ ದೃಶ್ಯವನ್ನು ಸುಮಾರು ದಿನಗಳಿಂದ ವೀಕ್ಷಿಸುತ್ತಿದ್ದ ತಹಸೀಲ್ದಾರ್ ಗಗನ ಸಿಂಧು ಅವರು, ಇಂದು ಸಂಜೆ ಆ ಮಹಿಳೆ ಕೂತಿದ್ದ ಸ್ಥಳಕ್ಕೆ ಬಂದು ಆಕೆಯ ಕೈ ಹಿಡಿದು ಕರೆದುಕೊಂಡು ಹೋಗಿ ತಮ್ಮ ಕಚೇರಿಯಲ್ಲಿ ಕೂಡಿಸಿ ವಿವರವಾಗಿ ವಿಚಾರಿಸಿದಾಗ, ಗೊತ್ತಾಗಿದ್ದು ಅಜ್ಜಿಗೆ ವಾರಸುದಾರರು ಯಾರು ಇಲ್ಲದ ಕಾರಣ ತಾನು ಇರುವ 04 ಗುಂಟೆ ಜಮೀನನ್ನು ಬೇರೆಯವರು ಅವರ ಹೆಸರಿಗೆ ನೋಂದಣಿ ಮಾಡಿಸಿಕೊಂಡು ನನಗೆ ಮೋಸ ಮಾಡಿದ್ದಾರೆ ಎಂದು ತಿಳಿಸಿದ ಕೂಡಲೇ ತಹಸೀಲ್ದಾರರು ಸಂಭಂದಪಟ್ಟ ಅಧಿಕಾರಿಗಳನ್ನು ಕರೆದು ಈ ವಯೋವೃದ್ಧೆ ಮಹಿಳೆಗೆ ಆಗಿರುವ ಅನ್ಯಾಯವನ್ನು ಸರಿಪಡಿಸಿ ಆದಷ್ಟು ಬೇಗನೆ ಅಜ್ಜಿಯ ಹೆಸರಿಗೆ ಆ 04 ಗುಂಟೆ ಜಮೀನನ್ನು ಮರು ನೊಂದಣಿ ಮಾಡಲು ತಿಳಿಸಿದರು.

## ಸೆಂಟ್ರಲ್ ಬ್ಯಾಂಕ್‌ಲ್ಲಿ ಮಹಾ ಮೋಸ –ಗ್ರಾಹಕರ ಅಸಲಿ ಚಿನ್ನವೇ ಮಾಯ!



**ಚಿಕ್ಕಮಗಳೂರು:** ನಗರದ ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಯಲ್ಲಿ ಗ್ರಾಹಕರು ಭದ್ರತೆಗೆ ಇಟ್ಟಿದ್ದ ಕೋಟ್ಯಂತರ ರೂಪಾಯಿ ಮೌಲ್ಯದ ಚಿನ್ನಾಭರಣ ಹಾಗೂ ನಗದು ಹಣವನ್ನು ಬ್ಯಾಂಕ್ ಸಿಬ್ಬಂದಿಯೇ ವಂಚನೆ ಮೂಲಕ ಲೂಟಿ ಮಾಡಿರುವ ಗಂಭೀರ ಆರೋಪ ಕೇಳಿಬಂದಿದೆ. ಈ ಘಟನೆ ಬ್ಯಾಂಕ್ ಗ್ರಾಹಕರಲ್ಲಿ ಭಾರೀ ಆತಂಕ ಮತ್ತು ಆಕ್ರೋಶಕ್ಕೆ ಕಾರಣವಾಗಿದೆ.

ಬ್ಯಾಂಕಿನಲ್ಲಿ ಅಸಲಿ ಚಿನ್ನವನ್ನು ಅಡವಿಟ್ಟು ಗೋಲ್ಡ್ ಲೋನ್ ಪಡೆದಿದ್ದ ಗ್ರಾಹಕರು ಇದೀಗ ದೊಡ್ಡ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬ್ಯಾಂಕ್ ಮ್ಯಾನೇಜರ್ ಸಂದೀಪ್, ಸಿಬ್ಬಂದಿ ನಾರಾಯಣಸ್ವಾಮಿ ಸೇರಿದಂತೆ ಐವರ ವಿರುದ್ಧ ವಂಚನೆ ಆರೋಪ ಕೇಳಿಬಂದಿದ್ದು, ಈ ಸಂಬಂಧ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. 2020ರಿಂದ 2025ರವರೆಗೆ ಹಲವು ವರ್ಷಗಳ ಕಾಲ ಈ ಬೃಹತ್ ಹಗರಣ ನಡೆದಿದೆ ಎಂಬ ಮಾಹಿತಿ ಲಭ್ಯವಾಗಿದೆ.

**ಹೆಚ್ಚುವರಿ ಸಾಲ ಮತ್ತು ನಕಲಿ ಚಿನ್ನದ ಆರೋಪ:**ತನಿಖೆಯ ಪ್ರಾಥಮಿಕ ಮಾಹಿತಿಯ ಪ್ರಕಾರ, ಗ್ರಾಹಕ–ರಿಗೆ ತಿಳಿಯದಂತೆ ಅವರ ಹೆಸರಿನಲ್ಲೇ ಹೆಚ್ಚುವರಿ ಗೋಲ್ಡ್ ಲೋನ್ ಮಂಜೂರು ಮಾಡಿ ಹಣವನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎನ್ನಲಾಗಿದೆ. ಅಡವಿಟ್ಟಿದ್ದ ಅಸಲಿ ಚಿನ್ನವನ್ನು ಮಾರಾಟ ಮಾಡಿ, ಅದರ ಬದಲಿಗೆ ನಕಲಿ ಚಿನ್ನವನ್ನು ಬ್ಯಾಂಕ್ ಲಾಕರ್‌ಗಳಲ್ಲಿ ಇಟ್ಟಿದ್ದಾರೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ.

80 ಗ್ರಾಂನಿಂದ 140 ಗ್ರಾಂವರೆಗೆ ಚಿನ್ನವನ್ನು ಅಡವಿಟ್ಟು ಸಾಲ ಪಡೆದಿದ್ದ ಹಲವು ಗ್ರಾಹಕರು, ಸಾಲವನ್ನು ಸಂಪೂರ್ಣವಾಗಿ ಮರುಪಾವತಿ ಮಾಡಿದ ಬಳಿಕ ಚಿನ್ನವನ್ನು ವಾಪಸ್ ಪಡೆಯಲು ಹೋದಾಗ ನಕಲಿ ಚಿನ್ನ ಇರುವುದನ್ನು ಕಂಡು ಬೆಚ್ಚಿಬಿದ್ದಿದ್ದಾರೆ. ಕೆಲವರಿಗೆ ತಮ್ಮ ಚಿನ್ನವೇ ಸಿಗದೇ ನಿರಾಶರಾಗಿದ್ದು, ಕಣ್ಣೀರು ಹಾಕುತ್ತಿರುವ ಘಟನೆಗಳು ವರದಿಯಾಗಿವೆ.


ಇದಷ್ಟೇ ಅಲ್ಲದೆ, ಕೆಲವು ಗ್ರಾಹಕರ ಸ್ಥಿರ ಠೇವಣಿ ಹಣವನ್ನೂ ದುರುಪಯೋಗಪಡಿಸಿಕೊಂಡಿರುವ ಸಾಧ್ಯತೆ ಇದೆ ಎಂಬ ಆರೋಪಗಳು ಹೊರಬಂದಿವೆ. ಇದರಿಂದ ಬ್ಯಾಂಕ್ ಮೇಲಿನ ವಿಶ್ವಾಸಕ್ಕೂ ಧಕ್ಕೆ ಉಂಟಾಗಿದೆ.

**ಕೇಂದ್ರ ಕಚೇರಿಗೆ ದೂರು:**ಸ್ಥಳೀಯ ಮಟ್ಟದಲ್ಲಿ ಸಮಸ್ಯೆಗೆ ಪರಿಹಾರ ಸಿಗದ ಹಿನ್ನೆಲೆಯಲ್ಲಿ ವಂಚನೆಗೆ ಒಳಗಾದ ಗ್ರಾಹಕರು ಬೆಂಗಳೂರಿನ ಕೇಂದ್ರ ಕಚೇರಿಯತ್ತ ಮುಖ ಮಾಡಿದ್ದಾರೆ. ಬ್ಯಾಂಕ್ ಹಿರಿಯ ಅಧಿಕಾರಿಗಳ ಗಮನಕ್ಕೆ ಪ್ರಕರಣವನ್ನು ತಂದಿರುವ ಸಂತ್ರಸ್ತರು, ಲಿಖಿತ ದೂರು ಸಲ್ಲಿಸಿ ನ್ಯಾಯ ಕೋರಿ ಮನವಿ ಮಾಡಿದ್ದಾರೆ.

“ಸಾಲದ ಮೊತ್ತವನ್ನು ಪಾವತಿಸಲು ನಾವು ಸಿದ್ಧರಿದ್ದೇವೆ. ಆದರೆ ನಮ್ಮ ಅಸಲಿ ಚಿನ್ನವನ್ನು ನಮಗೆ ವಾಪಸ್ ನೀಡಬೇಕು” ಎಂದು ಗ್ರಾಹಕರು ಮನವಿಯಲ್ಲಿ ತಿಳಿಸಿದ್ದಾರೆ.

**ತನಿಖೆ ಮುಂದುವರಿಕೆ:**ಈ ಪ್ರಕರಣ ಬೆಳಕಿಗೆ ಬಂದ ನಂತರ ಪೊಲೀಸರು ಪ್ರಾಥಮಿಕ ತನಿಖೆ ಆರಂಭಿಸಿದ್ದು, ಸಂಬಂಧಪಟ್ಟ ಸಿಬ್ಬಂದಿಯ ಪಾತ್ರ ಹಾಗೂ ಹಗರಣದ ವ್ಯಾಪ್ತಿಯನ್ನು ಪತ್ತೆಹಚ್ಚಲು ಕ್ರಮ ಕೈಗೊಳ್ಳಲಾಗಿದೆ. ಹಗರಣದ ಮೊತ್ತ ಇನ್ನಷ್ಟು ದೊಡ್ಡದಾಗಿರುವ ಸಾಧ್ಯತೆ ಇದ್ದು, ಇನ್ನೂ ಹೆಚ್ಚಿನ ಗ್ರಾಹಕರು ಮುಂದೆ ಬಂದು ದೂರು ನೀಡುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

## 16 ವರ್ಷದೊಳಗಿನ ಮಕ್ಕಳಿಗೆ ಸೋಶಿಯಲ್ ಮೀಡಿಯಾ ಬ್ಯಾನ್..?



**ಭಾರತ:** ಆಸ್ಟ್ರೇಲಿಯಾ ಸೇರಿದಂತೆ ವಿಶ್ವದ ಕೆಲವು ರಾಷ್ಟ್ರಗಳು 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ ಬಳಕೆಯನ್ನು ಕಾನೂನುಬದ್ಧವಾಗಿ ನಿಷೇಧಿಸಿವೆ. ಇದೇ ಮಾದರಿಯನ್ನು ಭಾರತದಲ್ಲಿಯೂ ಅಳವಡಿಸಿಕೊಳ್ಳುವ ಬಗ್ಗೆ ಕೇಂದ್ರ ಸರ್ಕಾರ ಗಂಭೀರ ಚಿಂತನೆ ನಡೆಸುತ್ತಿದೆ. ಈ ಮೂಲಕ ಮಕ್ಕಳನ್ನು ಸಾಮಾಜಿಕ ಜಾಲತಾಣಗಳಿಂದ ಮಕ್ಕಳನ್ನ ರಕ್ಷಿಸಲು ಕೇಂದ್ರ ಸರ್ಕಾರ ಮುಂದಾಗಿದೆ.

**ಅಶ್ವಿನಿ ವೈಷ್ಣವ್ ಅವರ ಹೇಳಿಕೆ:** ನವದೆಹಲಿಯಲ್ಲಿ ನಡೆದ ಕಾರ್ಯಕ್ರಮ ವೊಂದರಲ್ಲಿ ಮಾತನಾಡಿದ ಕೇಂದ್ರ ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ವಯಸ್ಸಿನ ಆಧಾರದ ಮೇಲೆ ಸಾಮಾಜಿಕ ಜಾಲತಾಣಗಳ ಬಳಕೆಯನ್ನು ನಿಯಂತ್ರಿಸುವುದು ಅಗತ್ಯವಿದೆ. ಅನೇಕ ದೇಶಗಳು ಈಗಾಗಲೇ ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಿವೆ. ಭಾರತವು ಸಹ ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ವಯಸ್ಸಿನ ಮಿತಿ ನಿಗದಿಪಡಿಸುವ ಕುರಿತು ಸಾರ್ವಜನಿಕ ಮತ್ತು ತಾಂತ್ರಿಕ ವಲಯದಲ್ಲಿ ಚರ್ಚೆಗಳನ್ನು ಆರಂಭಿಸಿದೆ ಎಂದು ತಿಳಿಸಿದ್ದಾರೆ.

**ಡೀಪ್‌ಫೇಕ್ ಮತ್ತು ಮಾನಸಿಕ ಆರೋಗ್ಯದ ಭೀತಿ:**ಕೇವಲ ವಯಸ್ಸಿನ ಮಿತಿ ಮಾತ್ರವಲ್ಲದೆ, ಇತ್ತೀಚಿನ ದಿನಗಳಲ್ಲಿ ತಲೆನೋವಾಗಿ ಪರಿಣಮಿಸಿರುವ 'ಡೀಪ್‌ಫೇಕ್' ತಂತ್ರಜ್ಞಾನದ ದುರ್ಬಳಕೆಯನ್ನು ತಡೆಯುವುದು ಸರ್ಕಾರದ ಪ್ರಮುಖ ಆದ–್ಯತೆಯಾಗಿದೆ. ಕೃತಕ ಬುದ್ಧಿಮತ್ತೆ ಬಳಸಿ ಸೃಷ್ಟಿಸುವ ನಕಲಿ ವಿಡಿಯೋಗಳು ಮತ್ತು ಫೋಟೋಗಳು ಮಕ್ಕಳ ಮೇಲೆ ನಕಾರಾತ್ಮಕ ಪ್ರಭಾವ ಬೀರುತ್ತಿವೆ. ಸೋಷಿಯಲ್ ಮೀಡಿಯಾ ವ್ಯಸನದಿಂದ ಮಕ್ಕಳಲ್ಲಿ ಏಕಾಗ್ರತೆಯ ಕೊರತೆ, ಖಿನ್ನತೆ ಮತ್ತು ಸೈಬರ್ ಬೆದರಿಕೆಗಳು ಹೆಚ್ಚಾಗುತ್ತಿವೆ ಎಂಬ ಆತಂಕವನ್ನು ಸಚಿವರು ವ್ಯಕ್ತಪಡಿಸಿದ್ದಾರೆ.

**ಜಾಲತಾಣ ಕಂಪನಿಗಳೊಂದಿಗೆ ಸರ್ಕಾರದ ಸಂವಾದ:** ಈ ಹೊಸ ನಿಯಮವನ್ನು ಜಾರಿಗೆ ತರುವ ಮುನ್ನ ಸರ್ಕಾರವು ಪ್ರಮುಖ ಸಾಮಾಜಿಕ ಜಾಲತಾಣಗಳಾದ ಇನ್‌ಸ್ಟಾಗ್ರಾಮ್ ಫೇಸ್‌ಬುಕ್ ಎಕ್ಸ್ ಮತ್ತು ಇತರ ವೇದಿಕೆಗಳ ಪ್ರತಿನಿಧಿಗಳೊಂದಿಗೆ ಮಾತುಕತೆ ನಡೆಸಿದೆ.

**ಬಳಕೆದಾರರ ವಯಸ್ಸನ್ನು ದೃಢೀಕ–ರಿಸಲು ಯಾವ ತಂತ್ರಜ್ಞಾನ ಬಳಸಬಹುದು ?**

**16 ವರ್ಷದೊಳಗಿನ ಮಕ್ಕಳ ಖಾತೆಗಳನ್ನು ಪತ್ತೆ ಹಚ್ಚುವುದು ಹೇಗೆ ?**

ಪೋಷಕರ ಅನುಮತಿ ಪಡೆಯುವ ಪ್ರಕ್ರಿಯೆಯನ್ನು ಹೇಗೆ ಕಡ್ಡಾಯಗೊಳಿಸಬಹುದು ? ಎಂಬ ಇತ್ಯಾದಿ ಪ್ರಶ್ನೆಗಳಿಗೆ ಈ ಕಂಪನಿಗಳಿಂದ ಸರ್ಕಾರವು ಅಧಿಕೃತ ಪ್ರತಿಕ್ರಿಯೆ ಹಾಗೂ ಸಲಹೆಗಳನ್ನು ಕೇಳಿದೆ.

**ಆಸ್ಟ್ರೇಲಿಯಾ ಮಾದರಿ ಭಾರತಕ್ಕೆ ಅನ್ವಯವೇ?:** ಆಸ್ಟ್ರೇಲಿಯಾ ಸರ್ಕಾರವು ಇತ್ತೀಚೆಗೆ 16 ವರ್ಷದೊಳಗಿನವರಿಗೆ ಸೋಷಿಯಲ್ ಮೀಡಿಯಾವನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಭಾರತದಲ್ಲಿ ಜನಸಂಖ್ಯೆ ಹೆಚ್ಚಿರುವುದರಿಂದ ಮತ್ತು ಡಿಜಿಟಲ್ ಸಾಕ್ಷರತೆಯ ಸವಾಲಿರುವುದರಿಂದ, ಇದನ್ನು ಹಂತ ಹಂತವಾಗಿ ಜಾರಿಗೆ ತರಲು ಸರ್ಕಾರ ಯೋಜಿಸಿದೆ. ಮಕ್ಕಳ ಶಿಕ್ಷಣ ಮತ್ತು ಸರ್ವತೋಮುಖ ಬೆಳವಣಿಗೆಗೆ ಪೂರಕವಾದ ಡಿಜಿಟಲ್ ಪರಿಸರ ನಿರ್ಮಿಸುವುದು ಸರ್ಕಾರದ ಮೂಲ ಉದ್ದೇಶವಾಗಿದೆ.

ಒಂದು ವೇಳೆ ಈ ನಿಯಮ ಜಾರಿಗೆ ಬಂದರೆ, ಲಕ್ಷಾಂತರ ಹದಿಹರೆಯದವರು ಸೋಷಿಯಲ್ ಮೀಡಿಯಾದಿಂದ ದೂರ ಉಳಿಯಬೇಕಾಗಬಹುದು. ಇದು ಪೋಷಕರಲ್ಲಿ ಸಂತಸ ತಂದಿದ್ದರೂ, ತಾಂತ್ರಿಕವಾಗಿ ಇದನ್ನು ಹೇಗೆ ಅನುಷ್ಠಾನ ಗೊಳಿಸಲಾಗುತ್ತದೆ ಎಂಬುದನ್ನ ಕಾದುನೋಡಬೇಕಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಇಂದಿನಿಂದ ಬಂಡೀಪುರ–ನಾಗರಹೊಳೆಯಲ್ಲಿ ಸಫಾರಿ ಪುನರಾರಂಭ

**ಬೆಂಗಳೂರು/ಚಾಮರಾಜನಗರ:** ರಾಜ್ಯದ ಪ್ರಮುಖ ವನ್ಯಜೀವಿ ಅಭಯಾರಣ್ಯಗಳಾದ ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ಮತ್ತು ಬಂಡೀಪುರ ರಾಷ್ಟ್ರೀಯ ಉದ್ಯಾನವನಗಳಲ್ಲಿ ಇಂದಿನಿದ ಸಫಾರಿ ಸೇವೆಗಳನ್ನು ಹಂತ ಹಂತವಾಗಿ ಪುನರಾರಂಭಿಸಲು ರಾಜ್ಯ ಸರ್ಕಾರ ಅನುಮತಿ ನೀಡಿದೆ. ಅರಣ್ಯ ಸಚಿವ ಈಶ್ವರ್ ಖಂಡ್ರೆ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಅಧಿಕೃತ ಮಾಹಿತಿ ನೀಡಿದ್ದಾರೆ.

ಅಕ್ಟೋಬರ್ ತಿಂಗಳಲ್ಲಿ ಈ ಪ್ರದೇಶಗಳಲ್ಲಿ ಹುಲಿ ದಾಳಿಯಿಂದ ಹಲವರು ಸಾವನ್ನಪ್ಪಿದ ಹಿನ್ನೆಲೆಯಲ್ಲಿ, ಮಾನವ ಜೀವಕ್ಕೆ ಆದ್ಯತೆ ನೀಡಿ ನವೆಂಬರ್ 7ರಿಂದ ಸಫಾರಿಯನ್ನು ಸ್ಥಗಿತಗೊಳಿಸಲಾಗಿತ್ತು. ಇದೀಗ ತಾಂತ್ರಿಕ ಸಮಿತಿಯ ಮಧ್ಯಂತರ ವರದಿ ಆಧರಿಸಿ, ಕೇವಲ 50% ವಾಹನ ಬಳಕೆಯೊಂದಿಗೆ ಸಫಾರಿ ಪುನರಾರಂಭಿಸಲು ನಿರ್ಧರಿಸಲಾಗಿದೆ.

**ಸಫಾರಿ ಸಮಯದಲ್ಲಿ ಬದಲಾವಣೆ:** ಸುರಕ್ಷತೆ ದೃಷ್ಟಿಯಿಂದ ಸಫಾರಿ ಸಮಯವನ್ನು 8 ಗಂಟೆಯಿಂದ 5 ಗಂಟೆಗೆ ಇಳಿಸಲಾಗಿದೆ. ಬಂಡೀಪುರದಲ್ಲಿ ಬೆಳಗ್ಗೆ 8ರಿಂದ ಸಂಜೆ 5ರವರೆಗೆ ಅವಕಾಶ ಇರಲಿದೆ. ಸುಂಕದಕಟ್ಟೆ ವಲಯದಲ್ಲಿ 6 ಗಂಟೆ ಮತ್ತು ನಾಗರಹೊಳೆಯಲ್ಲಿ ಪ್ರಥಮ ಹಂತದಲ್ಲಿ 4 ಗಂಟೆಗಳ ಕಾಲ ಮಾತ್ರ ಸಫಾರಿಗೆ ಅನುಮತಿ ನೀಡಲಾಗಿದೆ.

ಇದಕ್ಕೂ ಮೊದಲು ಕಾರ್ಯನಿರ್ವಹಿಸುತ್ತಿದ್ದ ವಾಹನಗಳ ಕೇವಲ ಅರ್ಧ ಸಂಖ್ಯೆಯನ್ನು ಮಾತ್ರ ಬಳಕೆ ಮಾಡಲು ಸೂಚಿಸಲಾಗಿದೆ. ಪರಿಸ್ಥಿತಿಯನ್ನು ಅವಲೋಕಿಸಿ,




ಸಂಪೂರ್ಣ ವರದಿ ಬಂದ ನಂತರ 100% ಸಫಾರಿ ಅನುಮತಿ ಕುರಿತು ತೀರ್ಮಾನ ಕೈಗೊಳ್ಳಲಾಗುತ್ತದೆ ಎಂದು ಸಚಿವರು ತಿಳಿಸಿದ್ದಾರೆ.

**ಮಾನವ–ಪ್ರಾಣಿ ಸಂಘರ್ಷ ತಡೆಗೆ ಕ್ರಮ:** ಸಚಿವರ ಪ್ರಕಾರ, ಪ್ರತಿವರ್ಷ 45–50 ಮಂದಿ ಮಾನವ–ಪ್ರಾಣಿ ಸಂಘರ್ಷದಲ್ಲಿ ಸಾವನ್ನಪ್ಪುತ್ತಿದ್ದಾರೆ. ಇದು ಆತಂಕಕಾರಿ ಬೆಳವಣಿಗೆ. ಈಗಾಗಲೇ 28 ಹುಲಿಗಳನ್ನು ನಾಡಿನಿಂದ ಹಿಡಿದು ಕಾಡಿಗೆ ಬಿಡಲಾಗಿದೆ. ಸಫಾರಿ ವಾಹನಗಳಿಗೆ ಜಿಪಿಎಸ್ ಮತ್ತು ಡ್ಯಾಶ್‌ಕ್ಯಾಮ್ ಅಳವಡಿಕೆಯನ್ನು ಕಡ್ಡಾಯಗೊಳಿಸಲಾಗಿದೆ.

ವನ್ಯಜೀವಿಗಳಿಂದ ಹಾನಿಗೊಳಗಾದವರಿಗೆ ಇಲಾಖೆ ಸಂಪೂರ್ಣ ನೆರವು ನೀಡುತ್ತಿದೆ. ಸಾವನ್ನಪ್ಪಿದ ಸಿಬ್ಬಂದಿಗೆ 30 ರಿಂದ 50 ಲಕ್ಷ ರೂ.ವರೆಗೆ ಪರಿಹಾರ, ಸಾರ್ವಜನಿಕರಿಗೆ 20 ಲಕ್ಷ ರೂ. ಪರಿಹಾರ ನೀಡಲಾಗುತ್ತಿದೆ. ಗಾಯಾಳುಗಳ ಚಿಕಿತ್ಸೆ ವೆಚ್ಚವನ್ನು ಸರ್ಕಾರವೇ ಭರಿಸಲಿದೆ.

**ಸಫಾರಿ ಆದಾಯ ಮತ್ತು ನಿರ್ಬಂಧಗಳು:** ಸಫಾರಿಯಿಂದ ವರ್ಷಕ್ಕೆ ಸುಮಾರು 20 ಕೋಟಿ ರೂ. ಆದಾಯ ಬರುತ್ತಿದೆ. ಆದರೆ ಸದ್ಯಕ್ಕೆ ಸುತ್ತಮುತ್ತಲಿನ ರೆಸಾರ್ಟ್‌ಗಳು, ಹೋಮ್‌ಸ್ಟೇಗಳು ಮತ್ತು ಕ್ಯಾಂಪ್‌ಫೈರ್ ಕಾರ್ಯಕ್ರಮಗಳಿಗೆ ನಿರ್ಬಂಧ ಮುಂದುವರಿದಿದೆ. ಈ ಬಗ್ಗೆ ಮುಖ್ಯಮಂತ್ರಿ ನೇತೃತ್ವದಲ್ಲಿ ಸಭೆ ನಡೆಸಿ ಮುಂದಿನ ನಿರ್ಧಾರ ಕೈಗೊಳ್ಳಲಾಗುತ್ತದೆ.

**ರೈತರಿಗೆ ಪರಿಹಾರ, ಗ್ರಾಮಗಳಿಗೆ ಅಭಿವೃದ್ಧಿ:** ವನ್ಯಜೀವಿಗಳ ದಾಳಿಯಿಂದ ಬೆಳೆ ನಾಶವಾದ ರೈತರಿಗೆ ಇದುವರೆಗೆ 50–60 ಕೋಟಿ ರೂ. ಪರಿಹಾರ ನೀಡಲಾಗಿದೆ. ತಕ್ಷಣ ಪರಿಹಾರ ನೀಡುವ ವ್ಯವಸ್ಥೆ ಜಾರಿಗೆ ತಂದಿದ್ದೇವೆ ಎಂದು ಸಚಿವರು ತಿಳಿಸಿದ್ದಾರೆ.

ಕಾಡಂಚಿನ ಗ್ರಾಮಗಳಿಗೆ ರಾತ್ರಿ ವೇಳೆ ನಿರಂತರ ವಿದ್ಯುತ್ ಪೂರೈಕೆ ಕಲ್ಪಿಸಲು ಸೂಚನೆ ನೀಡಲಾಗಿದೆ. ಗ್ರಾಮಾಭಿವೃದ್ಧಿಗೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ.

**ಅರಣ್ಯ ಒತ್ತುವರಿ ತೆರವು ಮತ್ತು ಪುನರ್ವಸತಿ:** ಸುಮಾರು 2.15 ಲಕ್ಷ ಎಕರೆ ಅರಣ್ಯ ಭೂಮಿ ಒತ್ತುವರಿ ಆಗಿದ್ದು, ಈಗಾಗಲೇ 7 ಸಾವಿರ ಎಕರೆ ತೆರವು ಮಾಡಲಾಗಿದೆ. ಅರಣ್ಯದ ಒಳಗೆ ವಾಸಿಸುವ ಕುಟುಂಬಗಳನ್ನು ಸ್ಥಳಾಂತರಿಸಲು 500 ಕೋಟಿ ರೂ. ಅನುದಾನ ಬೇಡಿಕೆ ಸಲ್ಲಿಸಲಾಗಿದೆ.

ಅರಣ್ಯ ಇಲಾಖೆಗೆ ಒಟ್ಟು ಬಜೆಟ್‌ನ 1% ಅನುದಾನ, ಅಂದರೆ ಸುಮಾರು 4,500 ಕೋಟಿ ರೂ. ನೀಡುವಂತೆ ಮನವಿ ಮಾಡಲಾಗಿದೆ.

# ಉತ್ತಮ ಕುಶಲತೆಯಿಂದ ಯಶಸ್ಸು ಸಾಧ್ಯ: ಕೆ.ಎಸ್. ರಾಜೇಶ್




**ಕೃಷ್ಣರಾಜಪೇಟೆ:** ಸ್ಪರ್ಧಾತ್ಮಕ ಜಗತ್ತಿನಲ್ಲಿ ಉತ್ತಮ ಕುಶಲತೆಯನ್ನು ಮೈಗೂಡಿಸಿಕೊಂಡಾಗ ಮಾತ್ರ ಯಶಸ್ಸು ಗಳಿಸಲು ಸಾಧ್ಯ. ವಿದ್ಯಾರ್ಥಿಗಳು ಬಾಲ್ಯದಿಂದಲೇ ಸ್ಪರ್ಧಾತ್ಮಕ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು ಎಂದು ಸಮಾಜಸೇವಕ ಹಾಗೂ ಪುರಸಭಾ ಮಾಜಿ ಸದಸ್ಯ ಕೆ.ಎಸ್. ರಾಜೇಶ್ ಅವರು ತಿಳಿಸಿದರು,

ಪಟ್ಟಣದ ಪ್ರಗತಿ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಆವರಣದಲ್ಲಿ ಆಯೋಜಿಸಲಾಗಿದ್ದ ವಿವಿಧ ಸ್ಪರ್ಧೆಗಳ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಶಾಲೆಗಳಲ್ಲಿ ಓದು–ಬರಹದ ಜೊತೆಗೆ ಆಟ–ಪಾಠಗಳಲ್ಲಿಯೂ ಮಕ್ಕಳು ಭಾಗವಹಿಸಬೇಕು. ಶಾಲಾ ಪರಿಸರವು ಮಕ್ಕಳನ್ನು ಅತ್ಯುತ್ತಮ ನಾಗರಿಕರನ್ನಾಗಿ ರೂಪಿಸುತ್ತದೆ. ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಹೊರತರಲು ಇಂತಹ ಸ್ಪರ್ಧೆಗಳು ಅತಿ ಅವಶ್ಯಕ ಆಧುನಿಕ ಯುಗದ ತೀವ್ರ ಪೈಪೋಟಿಯನ್ನು ಎದುರಿಸಲು ಜ್ಞಾನವೊಂದೇ ದಾರಿದೀಪ ಎಂದರು,

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ನಿವೃತ್ತ ಪ್ರಾಂಶುಪಾಲ ಹಾಗೂ ಲೇಖಕ ಕೆ. ಕಾಳೇಗೌಡ ಅವರು ವಿದ್ಯಾರ್ಥಿಗಳು ಶಾಲೆಯಲ್ಲಿ ಸಿಗುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯೂ ಜೀವನದಲ್ಲಿ ಒಂದು ಗುರಿಯನ್ನು ಹೊಂದಿರಬೇಕು. ಆ ಗುರಿಯನ್ನು ತಲುಪಲು ಪ್ರಾಮಾಣಿಕ ಪ್ರಯತ್ನ ಮಾಡಿದರೆ ಖಂಡಿತ ಯಶಸ್ಸು ಸಿಗುತ್ತದೆ ಎಂದು ಕಿವಿಮಾತು ಹೇಳಿದರು,

ಇದೇ ಸಂದರ್ಭದಲ್ಲಿ ಪುರಸಭೆಯ ಮಾಜಿ ಸದಸ್ಯ ಕೆ.ಬಿ. ನಂದೀಶ್, ಪತ್ರಕರ್ತರಾದ ಸಾಯಿಕುಮಾರ್ ಎನ್. ಕೆ. ಮತ್ತು ಶ್ರೀನಿವಾಸ್. ಹೆಚ್.ಜಿ. ಹೊಸಹೊಳಲು ಅವರು ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನಗಳನ್ನು ವಿತರಿಸಿ ಶುಭ ಕೋರಿದರು,

ಕಾರ್ಯಕ್ರಮದಲ್ಲಿ ಮುಖ್ಯಶಿಕ್ಷಕ ಗೋಪಾಲಕೃಷ್ಣ, ಪ್ರೌಢಶಾಲಾ ಶಿಕ್ಷಕಿ ನಂದಿನಿ, ಶಿಕ್ಷಕರಾದ ಎಚ್.ಆರ್. ಶೋಭಾ, ದಿವ್ಯಕುಮಾರಿ, ಧನಲಕ್ಷ್ಮಿ, ಎಚ್.ಆರ್. ಜ್ಯೋತಿ, ವಾಣಿ, ಲಕ್ಷ್ಮೀದೇವಿ, ಅನಿತಾ, ವನಿತಾ, ಸಬೀನಾ, ಸೇರಿದಂತೆ ಹಲವರು ಉಪಸ್ಥಿತರಿದ್ದರು, ಕಾರ್ಯಕ್ರಮದಲ್ಲಿ ಸ್ವಾಗತವನ್ನು ವರಲಕ್ಷ್ಮಿ, ನಿರೂಪಣೆಯನ್ನು ಮಹಾಲಕ್ಷ್ಮಿ, ವಂದನಾರ್ಪಣೆಯನ್ನು ನಿತ್ಯಶ್ರೀ, ಮಹಾಲಕ್ಷ್ಮಿ, ನಡೆಸಿಕೊಟ್ಟರು

# ಜಾಮೀನು ಪಡೆದು ಠಾಣೆಗೆ ಹೋದ ವ್ಯಕ್ತಿ ಮೇಲೆ ಪಿಎಸ್‌ಐ ಹಲ್ಲೆ



**ಬೆಂಗಳೂರು:** ನಿರೀಕ್ಷಣಾ ಜಾಮೀನು ಪಡೆದು ಪೊಲೀಸ್ ಠಾಣೆಗೆ ಹಾಜರಾದ ವ್ಯಕ್ತಿಯ ಮೇಲೆಯೇ ಪಿಎಸ್‌ಐ ಹಲ್ಲೆ ನಡೆಸಿದ ಆರೋಪ ಕೇಳಿಬಂದಿದ್ದು, ಈ ಸಂಬಂಧ ಮಾಗಡಿ ರೋಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕರ್ತವ್ಯ ನಿರ್ವಹಿಸುತ್ತಿದ್ದ ಪಿಎಸ್‌ಐ ಕೌಶಿಕ್ ವಿರುದ್ಧವೇ ಅದೇ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿರುವುದು ಗಮನಾರ್ಹವಾಗಿದೆ.

ನಿರೀಕ್ಷಣಾ ಜಾಮೀನು ಪ್ರತಿ ಹಿಡಿದು ಠಾಣೆಗೆ ಬಂದಿದ್ದ ಆರೋಪಿಯ ಮೇಲೆ ದೈಹಿಕ ಹಲ್ಲೆ ನಡೆಸಿ, ಅವಾಚ್ಯ ಪದಗಳಿಂದ ನಿಂದನೆ ಮಾಡಿರುವ ಆರೋಪದಡಿ ಈ ಪ್ರಕರಣ ದಾಖಲಾಗಿದೆ. ಅವಿನಾಶ್ ಎಂಬಾತ ನ್ಯಾಯಾಲಯದ ಮೂಲಕ ಖಾಸಗಿ ದೂರು ಸಲ್ಲಿಸಿದ್ದು, ಕೋರ್ಟ್ ಆದೇಶದ ಮೇರೆಗೆ ಪಿಎಸ್‌ಐ ಕೌಶಿಕ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

**ಜಾಮೀನು ಪಡೆದ ಬಳಿಕ ಹಲ್ಲೆ ಆರೋಪ:** ಮಾಹಿತಿಯ ಪ್ರಕಾರ, ಸಿವಿಲ್ ಪ್ರಕರಣದಲ್ಲಿ ಜಾಮೀನು ಪಡೆದು ಅವಿನಾಶ್ ಠಾಣೆಗೆ ಹಾಜರಾಗಿದ್ದ ವೇಳೆ, "ಬೇಲ್ ಜೊತೆ ಬಂದಿದಿಯಾ?" ಎಂದು ಅವಾಚ್ಯವಾಗಿ ನಿಂದಿಸಿ ಪಿಎಸ್‌ಐ ಕೌಶಿಕ್ ಕೆನ್ನೆಗೆ ಹೊಡೆದು ಕಿವಿಗೆ ಹಾನಿ ಉಂಟುಮಾಡಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಈ ಸಂಬಂಧ ವೈದ್ಯಕೀಯ ವರದಿ (ಎಂಎಲ್‌ಸಿ)ಯಲ್ಲೂ ಗಾಯಗಳ ವಿವರ ದಾಖಲಾಗಿರುವುದಾಗಿ ತಿಳಿದುಬಂದಿದೆ.

ಇದಷ್ಟೇ ಅಲ್ಲದೆ, ಈ ಪ್ರಕರಣದಲ್ಲಿ ಜಾಮೀನು ಪಡೆದಿದ್ದರೆ ನಿನ್ನ ವಿರುದ್ಧ ಮತ್ತೊಂದು ಪ್ರಕರಣ ದಾಖಲಿಸುತ್ತೇನೆ ಎಂದು ಬೆದರಿಕೆ ಹಾಕಿರುವುದಾಗಿ ದೂರಿನಲ್ಲಿ ಆರೋಪಿಸಲಾಗಿದೆ.

**ಕುಟುಂಬದ ಮೇಲೂ ಹಲ್ಲೆ ಆರೋಪ:** ಇದಕ್ಕೂ ಮೊದಲು ಅವಿನಾಶ್ ಅವರ ತಾಯಿ ಪ್ರಮೀಳಾ ವಿರುದ್ಧ ಚೀಟಿ ಹಣ ವಂಚನೆ ಪ್ರಕರಣದಲ್ಲಿ ಲಕ್ಷ್ಮೀ ಎಂಬುವವರು ದೂರು ನೀಡಿದ್ದರು. ಆ ದೂರಿನ ಮೇರೆಗೆ ಪ್ರಮೀಳಾ ವಿರುದ್ಧ ಪ್ರಕರಣ ದಾಖಲಾಗಿದ್ದು, ತನಿಖೆ ವೇಳೆ ಪಿಎಸ್‌ಐ ಕೌಶಿಕ್ ನೋಟಿಸ್ ನೀಡದೇ ಅವಿನಾಶ್ ಅವರ ಕುಟುಂಬ ಸದಸ್ಯರಾದ ತಾಯಿ, ಸಹೋದರಿ ಮತ್ತು ತಂದೆಯ ಮೇಲೂ ಹಲ್ಲೆ ನಡೆಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಜಾಮೀನು ಪಡೆದ ನಂತರವೂ ಅವಿನಾಶ್ ಅವರನ್ನು ಅವಾಚ್ಯವಾಗಿ ನಿಂದಿಸಿ, ಅವರ ತಾಯಿ ಹಾಗೂ ಸಹೋದರಿ ಎದುರಲ್ಲೇ ದೈಹಿಕ ಹಲ್ಲೆ ನಡೆಸಲಾಗಿದೆ ಎಂದು ದೂ–ರಿನಲ್ಲಿ ವಿವರಿಸಲಾಗಿದೆ. ಈ ಹಿನ್ನೆಲೆ ಅವಿನಾಶ್ ಮಾಗಡಿ ರೋಡ್ ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಕೌಶಿಕ್ ಜೊತೆಗೆ ಲಕ್ಷ್ಮೀ ಹಾಗೂ ನರಸಿಂಹ ವಿರುದ್ಧವೂ ದೂರು ದಾಖಲಿಸಿದ್ದಾರೆ.

**ತನಿಖೆ ಮುಂದುವರಿಕೆ:** ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಗಳ ಕುರಿತು ತನಿಖೆ ಆರಂಭಿಸಿದ್ದು, ಘಟನೆಗೆ ಸಂಬಂಧಿಸಿದಂತೆ ಸಾಕ್ಷ್ಯಗಳು ಹಾಗೂ ಹೇಳಿಕೆಗಳನ್ನು ಸಂಗ್ರಹಿಸುತ್ತಿದ್ದಾರೆ. ಪೊಲೀಸ್ ಅಧಿಕಾರಿಯ ವಿರುದ್ಧವೇ ಪ್ರಕರಣ ದಾಖಲಾಗಿರುವುದು ಇಲಾಖೆಯಲ್ಲಿಯೂ ಚರ್ಚೆಗೆ ಕಾರಣವಾಗಿದ್ದು, ಮುಂದಿನ ಕ್ರಮಗಳತ್ತ ಎಲ್ಲರ ಗಮನ ಹರಿದಿದೆ.

# ನರಹಂತಕ ಕಾಡಾನೆ ಸೆರೆಗೆ ಸಾಕಾನೆ ಬಳಸಿ ಕಾರ್ಯಾಚರಣೆ



**ಚಿಕ್ಕಮಗಳೂರು:** ಕಾಫಿನಾಡಿನಲ್ಲಿ ಇತ್ತೀಚೆಗೆ ಕಾಡಾನೆ ದಾಳಿಗೆ ಕಾರ್ಮಿಕನೊಬ್ಬ ಬಲಿಯಾದ ಹಿನ್ನೆಲೆ, ನರಹಂತಕ ಕಾಡಾನೆಯನ್ನು ಸೆರೆಹಿಡಿಯಲು ಅರಣ್ಯ ಇಲಾಖೆ ವ್ಯಾಪಕ ಕಾರ್ಯಾಚರಣೆ ಆರಂಭಿಸಿದೆ. ಈ ಕಾರ್ಯಾಚರಣೆಗೆ ಶಿವಮೊಗ್ಗದ ಸಕ್ರೆಬೈಲ್ ಆನೆ ಶಿಬಿರದಿಂದ ಸಾಕಾನೆಗಳ ತಂಡವನ್ನು ತರಲಾಗಿದ್ದು, ಗ್ರಾಮಸ್ಥರಲ್ಲಿ ಆತಂಕದ ನಡುವೆ ಕಾಡಾನೆ ಸೆರೆಗೆ ತಯಾರಿ ನಡೆಯುತ್ತಿದೆ.

ಚಿಕ್ಕಮಗಳೂರು ತಾಲೂಕಿನ ಹುಣಸೇಹಳ್ಳಿ ಸಮೀಪದ ಪುರ ಗ್ರಾಮದ ಸುತ್ತಮುತ್ತ ಕಾಡಾನೆಗಳ ಸಂಚರಣೆ ಹೆಚ್ಚಾಗಿರುವುದರಿಂದ, ಸಕ್ರೆಬೈಲ್ ಶಿಬಿರದಿಂದ ಐದು ಸಾಕಾನೆಗಳ ತಂಡವನ್ನು ಸ್ಥಳಕ್ಕೆ ಕಳುಹಿಸಲಾಗಿದೆ. ಪ್ರದೇಶದಲ್ಲಿ ಮೂರು ಕಾಡಾನೆಗಳು ಸಂಚರಿಸುತ್ತಿದ್ದು, ಅವುಗಳಲ್ಲಿ ಮಾನವ ಜೀವಕ್ಕೆ ಅಪಾಯಕಾರಿಯಾಗಿರುವ ಒಂದು ಕಾಡಾನೆಯನ್ನು ಸೆರೆಹಿಡಿಯಲು ಸರ್ಕಾರ ಆದೇಶ ನೀಡಿದೆ ಎಂದು ಅರಣ್ಯ ಇಲಾಖೆ ತಿಳಿಸಿದೆ.

ಉಳಿದ ಎರಡು ಕಾಡಾನೆಗಳ ಚಲನ–ವಲನವನ್ನು ನಿಗಾದಲ್ಲಿಡಲು ರೇಡಿಯೋ ಕಾಲರ್ ಅಳವಡಿಸುವ ಯೋಜನೆಯೂ ರೂಪಿಸಲಾಗಿದೆ. ಇದರಿಂದ ಅವುಗಳ ಸಂಚರಣೆ ಕುರಿತು ಮಾಹಿತಿ ಪಡೆದು ಭವಿಷ್ಯದಲ್ಲಿ ಸಂಭವಿಸಬಹುದಾದ ಅಪಾಯಗಳನ್ನು ತಡೆಗಟ್ಟಲು ಸಾಧ್ಯವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇತ್ತೀಚೆಗೆ ಕಾಡಾನೆ ದಾಳಿಗೆ ಯಲ್ಲಪ್ಪ ಎಂಬ ಕಾರ್ಮಿಕರು ಬಲಿಯಾಗಿದ್ದ ಘಟನೆ ಗ್ರಾಮಸ್ಥರಲ್ಲಿ ಭಾರೀ ಆಕ್ರೋಶಕ್ಕೆ ಕಾರಣವಾಗಿತ್ತು. ಘಟನೆ ಬಳಿಕ ಕಾಡಾನೆ ಭೀತಿ ಹೆಚ್ಚಿದ ಹಿನ್ನೆಲೆಯಲ್ಲಿ ಸ್ಥಳೀಯರು ಬಾಳೆಹೊನ್ನೂರು ಅರಣ್ಯ ಇಲಾಖೆ ಕಚೇರಿ ಎದುರು ಪ್ರತಿಭಟನೆ ನಡೆಸಿ, ತಕ್ಷಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದರು.

ಗ್ರಾಮಸ್ಥರ ಒತ್ತಡ ಹಾಗೂ ಪರಿಸ್ಥಿತಿಯ ಗಂಭೀರತೆಯನ್ನು ಮನಗಂಡ ಅರಣ್ಯ ಇಲಾಖೆ ಇದೀಗ ಸಾಕಾನೆಗಳ ನೆರವಿನಿಂದ ಕಾಡಾನೆಯನ್ನು ಪತ್ತೆಹಚ್ಚಿ ಸೆರೆಹಿಡಿಯಲು ಕಾರ್ಯಾಚರಣೆ ಆರಂಭಿಸಿದೆ. ಸ್ಥಳದಲ್ಲಿ ಕಟ್ಟುನಿಟ್ಟಿನ ನಿಗಾವಹಿಸಲಾಗಿದ್ದು, ಗ್ರಾಮಸ್ಥರಿಗೆ ಎಚ್ಚರಿಕೆಯಿಂದ ಸಂಚ–ರಿಸುವಂತೆ ಸೂಚಿಸಲಾಗಿದೆ.

ಸದ್ಯ ಕಾರ್ಯಾಚರಣೆ ಮುಂದುವರಿದಿದ್ದು, ಕಾಡಾನೆ ಸೆರೆ ಸಿಕ್ಕುವವರೆಗೆ ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಸಾಕಾನೆಗಳ ತಂಡ ಪ್ರದೇಶದಲ್ಲೇ ತಂಗಿ ಕಾರ್ಯ ನಿರ್ವಹಿಸಲಿವೆ. ಈ ಬೆಳವಣಿಗೆ ಗ್ರಾಮಸ್ಥರಿಗೆ ಸ್ವಲ್ಪ ಮಟ್ಟಿನ ನಿಟ್ಟುಸಿರು ನೀಡಿದರೂ, ಸಂಪೂರ್ಣ ಸುರಕ್ಷತೆಗಾಗಿ ಶೀಘ್ರ ಕ್ರಮ ಕೈಗೊಳ್ಳಬೇಕೆಂಬ ಬೇಡಿಕೆ ಮುಂದುವರಿದಿದೆ.

# ಮಾಜಿ ಪತ್ನಿಯ ಮನೆಗೆ ನುಗ್ಗಿ ಇರಿದು ಕೊಂದ ವ್ಯಕ್ತಿ



**ಹೈದರಾಬಾದ್:** ಟೆಕ್ಕಿಯಾಗಿದ್ದ ತನ್ನ ಮಾಜಿ ಪತ್ನಿಯ ಮನೆಗೆ ನುಗ್ಗಿದ ವ್ಯಕ್ತಿಯೊಬ್ಬ ಚಾಕುವಿ ನಿಂದ ಇರಿದು ಹತ್ಯೆ ಮಾಡಿದ ದಾರುಣ ಘಟನೆ ಹೈದರಾಬಾದ್‌ನಲ್ಲಿ ನಡೆದಿದೆ. ಮೃತ ಮಹಿಳೆ 29 ವರ್ಷದ ಐಟಿ ಕಂಪನಿ ಉದ್ಯೋಗಿಯಾಗಿದ್ದು, ಘಟನೆ ನಗರದಲ್ಲಿ ಆತಂಕಕ್ಕೆ ಕಾರಣವಾಗಿದೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಆರೋಪಿ ತನ್ನ ತಾಯಿಯ ಸಾವಿಗೆ ಮಾಜಿ ಪತ್ನಿಯೇ ಕಾರಣ ಎಂದು ಆರೋಪಿಸಿ ವೈಮನಸ್ಸು ಹೊಂದಿದ್ದಾನೆ. ಮಹಿಳೆಯ ಎರಡನೇ ಪತಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ಮೃತಳು ಮೂರು ತಿಂಗಳ ಗರ್ಭಿಣಿಯಾಗಿದ್ದಾಳೆ ಎಂಬ ಸಂಗತಿಯನ್ನೂ ಪೊಲೀಸರಿಗೆ ತಿಳಿಸಿದ್ದಾರೆ.

**ವೈವಾಹಿಕ ಕಲಹದ ಹಿನ್ನೆಲೆ:** ಸುಮಾರು 30 ವರ್ಷದ ಆರೋಪಿ 2022ರಲ್ಲಿ ಆ ಮಹಿಳೆಯನ್ನು ವಿವಾಹವಾಗಿದ್ದನು. ಮದುವೆ ಭಾರತದಲ್ಲೇ ನಡೆದಿದ್ದು, ನಂತರ ಆರೋಪಿ ಕೆನಡಾಕ್ಕೆ ತೆರಳಿ ಪತ್ನಿಯೊಂದಿಗೆ ಅಲ್ಲೇ ವಾಸಿಸುತ್ತಿದ್ದನು. ದಂಪತಿಗಳ ನಡುವೆ ಕೆಲ ಭಿನ್ನಾಭಿಪ್ರಾಯಗಳು ಉಂಟಾದ ಪರಿಣಾಮ ಮಹಿಳೆ ಭಾರತಕ್ಕೆ ಮರಳಿದ್ದರು.

ಭಾರತಕ್ಕೆ ಬಂದ ಬಳಿಕ ಮಹಿಳೆ ಮಹಾರಾಷ್ಟ್ರದಲ್ಲಿ ಪತಿಯ ವಿರುದ್ಧ ಕೌಟುಂಬಿಕ ಹಿಂಸಾಚಾರ ಪ್ರಕರಣ ದಾಖಲಿಸಿದ್ದರು. ಈ ಕಲಹಗಳು ಮುಂದುವರಿದ ಹಿನ್ನೆಲೆ, ದಂಪತಿ 2024ರಲ್ಲಿ ಕಾನೂನುಬದ್ಧವಾಗಿ ವಿಚ್ಛೇದನ ಪಡೆದಿದ್ದರು.

**ಮರುಮದುವೆ ಬಳಿಕ ನಡೆದ ದಾಳಿ:** ವಿಚ್ಛೇದನದ ನಂತರ ಮಹಿಳೆ 2025ರ ಏಪ್ರಿಲ್‌ನಲ್ಲಿ ಮತ್ತೊಬ್ಬ ವ್ಯಕ್ತಿಯನ್ನು ವಿವಾಹವಾಗಿದ್ದರು. ಹೊಸ ಜೀವನ ಆರಂಭಿಸಿದ್ದ ಮಹಿಳೆ ಗರ್ಭಿಣಿಯಾಗಿದ್ದ ಸಂದರ್ಭದಲ್ಲಿ ಆರೋಪಿ ಮನೆಗೆ ನುಗ್ಗಿ ಚಾಕುವಿನಿಂದ ಇರಿದು ಹತ್ಯೆ ನಡೆಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆಯ ಬಳಿಕ ಆರೋಪಿಯನ್ನು ಬಂಧಿಸಲು ಪೊಲೀಸರು ಶೋಧ ಕಾರ್ಯಾಚರಣೆ ಆರಂಭಿಸಿದ್ದು, ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ. ಈ ದುರ್ಘಟನೆ ಕುಟುಂಬಸ್ಥರು ಮತ್ತು ನೆರೆಹೊರೆಯವರನ್ನು ಬೆಚ್ಚಿಬೀಳಿಸಿದ್ದು, ವೈವಾಹಿಕ ಕಲಹಗಳು ಹಿಂಸಾತ್ಮಕ ಅಂತ್ಯ ಕಂಡಿರುವುದು ಚರ್ಚೆಗೆ ಕಾರಣವಾಗಿದೆ.

# ಛತ್ರಪತಿ ಶಿವಾಜಿ ಮಹಾರಾಜ್ ಅವರ ಗೌರವದ ದಿನ "ಶಿವಾಜಿ ಮಹಾರಾಜ್ ಜಯಂತಿ "



ಶಿವಾಜಿ ಮಹಾರಾಜ್ ಜಯಂತಿ ಅನ್ನು ಫೆಬ್ರವರಿ 19 ರಂದು ಮರಾಠ ಸಾಮ್ರಾಜ್ಯದ ಸಂಸ್ಥಾಪಕ ಛತ್ರಪತಿ ಶಿವಾಜಿ ಮಹಾರಾಜರನ್ನು ಗೌರವಿಸಲು ಆಚರಿಸಲಾಗುತ್ತದೆ . ಈ ದಿನವು ಅವರ ಧೈರ್ಯ, ನಾಯಕತ್ವ, ಮಿಲಿಟರಿ ತೇಜಸ್ಸು ಮತ್ತು ಸ್ವರಾಜ್ಯದ ದೃಷ್ಟಿಯನ್ನು ನೆನಪಿಸುತ್ತದೆ.

ಶಿವ ಜಯಂತಿ , ಛತ್ರಪತಿ ಶಿವಾಜಿ ಮಹಾರಾಜ್ ಹಬ್ಬ ಎಂದೂ ಕರೆಯಲ್ಪಡುವ ಇದು ಭಾರತದ ಮಹಾರಾಷ್ಟ್ರ ರಾಜ್ಯದ ಹಬ್ಬ ಮತ್ತು ಸಾರ್ವಜನಿಕ ರಜಾದಿನವಾಗಿದೆ . ಈ ಹಬ್ಬವನ್ನು ಫೆಬ್ರವರಿ 19 ರಂದು ಆಚರಿಸಲಾಗುತ್ತದೆ, ಇದು ಮರಾಠರ ಮೊದಲ ಛತ್ರಪತಿ ಶಿವಾಜಿ ಮಹಾರಾಜರ ಜನ್ಮ ವಾರ್ಷಿಕೋತ್ಸವವನ್ನು ಆಚರಿಸುತ್ತದೆ.

ನಾಗಪುರದ ಭೋಸಲೆಗಳು, ಬಡೋಡಾದ ಗಾಯಕವಾಡರು ಸೇರಿದಂತೆ ವಿವಿಧ ಮರಾಠಾ ಸರದಾರರ ರಾಜಮನೆತನದವರಿಂದ ಪಡೆದ ಅಧಿಕೃತ ದಾಖಲೆಗಳನ್ನು ಉಲ್ಲೇಖಿಸಿ, ಛತ್ರಪತಿ ಶಿವಾಜಿ ಮಹಾರಾಜರ ಜನ್ಮ ತಿಥಿಯನ್ನು 'ಫಲ್ಗುಣ ವಾದ್ಯ ತೃತೀಯಾ' ಎಂದು ಸ್ಪಷ್ಟವಾಗಿ ಉಲ್ಲೇಖಿಸಿದ ನಂತರ, ಲೋಕಮಾನ್ಯ ತಿಲಕರು 1912 ರ ಫೆಬ್ರವರಿ 1630 ಅನ್ನು ಅನುಗುಣವಾದ ದಿನಾಂಕವೆಂದು ಸ್ಥಾಪಿಸಿದರು ಮತ್ತು ವ್ಯಾಪಕವಾದ ವಾರ್ಷಿಕ ಶಿವಜಯಂತಿ ಆಚರಣೆಯನ್ನು ಪ್ರಾರಂಭಿಸಾಲು ಸ್ವಾಭಿಮಾನಿ ರಾಷ್ಟನಿರ್ಮಾಣಕ್ಕೆ ಹೋರಾಡಿದ ಛತ್ರಪತಿ ಶಿವಾಜಿ ಮಹಾರಾಜರು ಹಿಂದೂಸ್ಥಾನವನ್ನು ಒಗ್ಗೂಡಿಸಲು ಬಹುವಾಗಿ ಶ್ರಮಿಸಿದರು.ಕೊಂಕಣ ಭಾಗದಲ್ಲಿದ್ದ ಅನೇಕ ಕೋಟೆಗಳನ್ನು ಗೆದ್ದು ಕ್ರಮೇಣ ಇಡೀ ಪಶ್ಚಿಮಭಾರತವನ್ನು ತಮ್ಮ ಆಳ್ವಿಕೆಗೆ ತಂದರು.ಶಿವಾಜಿಯ ಶೌರ್ಯ, ಸಾಹಸ ರಾಷ್ಟಭಕ್ತ ಆಡಳಿತಗಾರರಿಗೆ ಎಂದೆಂದಿಗೂ ಪ್ರೇರಣಾದಾಯಿ.

ಮಹಾರಾಷ್ಟದ ಅಸ್ಮಿತೆ ಶಿವಾಜಿ ಭೋಂಸ್ಲೆ ಅವರ ಕುಟುಂಬದ ತಾಯಿಬೇರು ಕನ್ನಡನಾಡಿನಲ್ಲಿದೆ. ಕರ್ನಾಟಕಕ್ಕೂ ಮರಾಠರಿಗೂ ರಾಜಕೀಯ ಒಡನಾಟ ಆರಂಭವಾಗಿದ್ದು 17 ನೇ ಶತಮಾನದ ಮೊದಲರ್ಧದಲ್ಲಿ.ರಾಜ್ಯ ವಿಸ್ತರಣೆಯಲ್ಲಿ ಮೊಘಲ–ರಿಗೂ ಬಿಜಾಪುರದ ಆದಿಲ್ ಶಾಹಿಗಳಿಗೂ ಕರಾರು ಏರ್ಪಟ್ಟು ಕರ್ನಾಟಕದ ದಕ್ಷಿಣ ಭಾಗ ಹಾಗೂ ತಮಿಳುನಾಡಿನ ಕೆಲವು ಭಾಗಗಳ ಮೇಲೆ ಹಿಡಿತ ಸಾಧಿಸಲು ಹವಣಿಸುತ್ತಿದ್ದರು. ಇದರಿಂದಾಗಿ ವಿಜಾಪುರದ ಸುಲ್ತಾನರು ಈ ಪ್ರದೇಶಗಳಲ್ಲಿ ಆಗಿಂದ್ದಾಗ್ಗೆ ದಂಡಯಾತ್ರೆಗಳನ್ನು ನಡೆಸುತ್ತಲೇ ಇದ್ದರು.ಇಂತಹ ದಂಡಯಾತ್ರೆಗಳಲ್ಲಿ ಮರಾಠಿ ಸರದಾರರು ಮುಂಚೂಣಿಯಲ್ಲಿದ್ದು ಬಹುತೇಕ ಗೆಲುವುಗಳಿಗೆ ಕಾರಣರಾಗಿದ್ದರು.ಇಂತಹ ಧೈರ್ಯಶಾಲಿ ಮರಾಠಿ ಸರದಾರರದಲ್ಲಿ ಮಾಲೋಜಿ ಭೋಂಸ್ಲೆಯ ಮಗ ಶಹಾಜಿ ಭೋಂಸ್ಲೆ ಅವರೂ ಒಬ್ಬರು. ವಿಜಾಪುರದ ಅಣತಿಯಂತೆ ಸೈನ್ಯ ಮುನ್ನಡೆಸುತ್ತಿದ್ದ ಶಹಾಜಿ ಹಾಗೂ ರಣದುಲ್ಲಾ ಖಾನ್‌ರು ಬೆಂಗಳೂರು ಕೆಂಪೇಗೌಡರ ಸೈನ್ಯದೊಡನೆ ಮುಖಾಮುಖಿಯಾಗಿದ್ದು ಡಿಸೆಂಬರ್ ಮಾಹೆಯಲ್ಲಿ.ಜೋರು ಕಾಳಗದ ಬಳಿಕ ಸಂಧಿ ಏರ್ಪಟ್ಟು ಕೆಂಪೇಗೌಡ ತನ್ನ ರಾಜಧಾನಿಯನ್ನು ಮಾಗಡಿಗೆ ಸ್ಥಳಾಂತ–ರಿಸಿದಾಗ ಬೆಂಗಳೂರು ಕೋಟೆ ವಿಜಾಪುರ ಸುಲ್ತಾನರ ಕೈವಶವಾಯಿತು.ಆಗ ಬೆಂಗಳೂರನ್ನು ಮಹಮ್ಮದ್ ಆದಿಲ್ ಷಾನಿಂದ ಜಹಗೀರು ಪಡೆದರು ಶಹಾಜಿ ಭೋಂಸ್ಲೆ.ಛತ್ರಪತಿ ಶಿವಾಜಿ ಸತ್ತ ಸ್ಥಳ ಚಿತ್ರದುರ್ಗದ ಬೊಮ್ಮಸಮುದ್ರ.

ಬಹುಪಾಲು ಸಮಯವನ್ನು ಯುದ್ಧಗಳಲ್ಲಿಯೇ ಕಳೆಯುತ್ತಿದ್ದ ಶಹಾಜಿ ಅವರು ಜೀಜಾಬಾಯಿಯ ಲಗ್ನವಾಗಿದ್ದರು. ಇವರ ಮಗನಾಗಿ ಶಿವಾಜಿ ಹುಟ್ಟಿದ್ದು ಪುಣೆಯ ಸಮೀಪದ ಶಿವನೇರಿ ದುರ್ಗದಲ್ಲಿ. ಬೆಂಗಳೂರನ್ನು ಜಹಗೀರಾಗಿ ಪಡೆದು ಅದನ್ನು ಮುಖ್ಯ ಸೇನಾನೆಲೆಯನ್ನಾಗಿ ಮಾಡಿಕೊಂಡು ದ್ವಿತೀಯ ಪತ್ನಿ ಸುಧಾಬಾಯಿಯೊಡನೆ ವಾಸಿಸುತ್ತಿದ್ದರು. ಇಲ್ಲಿ ಶಹಾಜಿ ಜಾಗೀರುದಾರರಾಗಿದ್ದರೂ ಸ್ವತಂತ್ರ ರಾಜರಂತೆಯೇ ಆಡಳಿತ ನಡೆಸುತ್ತಿದ್ದರು. ತಮ್ಮದೇ ಆದ ನಾಣ್ಯಗಳನ್ನು ಠಂಕಿಸುತ್ತಿದ್ದರು. ಕೋಟೆ ಪ್ರದೇಶದಲ್ಲಿ ಗೌರಿ ಮಹಲ್ ಎಂಬ ಸುಸಜ್ಜಿತ ಮನೆಯನ್ನು ನಿವಿಣಟಿಜಜಜಿಟಿಜರ್ಜಸಿದ್ದರು. ನಂದಿಬೆಟ್ಟ ಆಗಲೇ ಶಹಾಜಿ ಬೇಸಿಗೆ ರಾಜಧಾನಿಯಾಗಿತ್ತು. ಶಿವಾಜಿಯ ಮೊದಲ ಮಗ ಸಂಬಾಜಿ ಕೋಲಾರ–ದೊಡ್ಡಬಳ್ಳಾಪುರ ಪ್ರದೇಶಗಳ ಆಡಳಿತ ವ್ಯವಸ್ಥೆ ನೋಡಿಕೊಳ್ಳುತ್ತಿದ್ದರು.

17 ನೇ ಶತಮಾನದಲ್ಲಿ, ಶಿವಾಜಿ ಪೂರ್ವ ಭಾರತದಲ್ಲಿ ರಾಜ್ಯಭಾರ ಮಾಡುತ್ತಿದ್ದರು. ಅವರ ತಾಯಿ ಜೀಜಾಮಾತೆಯು ಶಿವಾಜಿಗೆ ಸಣ್ಣ ವಯಸ್ಸಿನಿಂದಲೂ ನಾಮಜಪವನ್ನು ಮಾಡಿಸುತ್ತಿದ್ದಳು. ಒಬ್ಬ ರಾಜನಿಗೆ ಬೇಕಾದ ಎಲ್ಲ ಯುದ್ಧಕಲೆಗಳನ್ನೂ ಜೀಜಾಮಾತೆಯು ಶಿವಾಜಿಗೆ ಕಲಿಸಿದ್ದಳು. ಜೀಜಾಮಾತೆ ಮತ್ತು ಗುರು ರಾಮದಾಸ ಸ್ವಾಮಿಗಳ ಮಾರ್ಗದರ್ಶನದಲ್ಲಿ ಶಿವಾಜಿಯು ಆದರ್ಶ ರಾಜನಾದನು. ಶಿವಾಜಿಯು ಧೈರ್ಯದಿಂದ ಮರಾಠರನ್ನು ಮೊಗಲರ ವಿರುದ್ಧ ಮುನ್ನಡೆಸಿದನು. ಶಿವಾಜಿಯು ಆದರ್ಶ ರಾಜ್ಯವನ್ನು ಸ್ಥಾಪಿಸಿದನು. ಶಿವಾಜಿಯು ರಾಜ್ಯವನ್ನು ಧೈರ್ಯ,ಸಹನೆ ಮುಂತಾದ ಆಧ್ಯಾತ್ಮಿಕ ಗುಣಗಳ ಬಲದಲ್ಲಿ ಸ್ಥಾಪಿಸಿದ್ದನು.

ಶಿವಾಜಿ ಮಹಾರಾಜರು 1680 ಏಪ್ರಿಲ್ 03 ರಂದು ಮರಣ ಹೊಂದಿದರು.

# 3 ವರ್ಷದ ಮಗುವಿನ ಮೇಲೆ ಅಪ್ಪನ ಗೆಳೆಯನಿಂದಲೇ ಅತ್ಯಾಚಾರ

**ವಿಶಾಖಪಟ್ಟಣಂ:** ಆಂಧ್ರಪ್ರದೇಶದ ವಿಶಾಖ ಪಟ್ಟಣಂ ಜಿಲ್ಲೆಯ ಪೆಡಗಂಟ್ಯಾಡ ಮಂಡಲದಲ್ಲಿ ಮೂರು ವರ್ಷದ ಬಾಲಕಿಯ ಮೇಲೆ ತಂದೆಯ ಸ್ನೇಹಿತನಿಂದಲೇ ಲೈಂಗಿಕ ದೌರ್ಜನ್ಯ ಎಸಗಿರುವ ಘಟನೆ ಬೆಳಕಿಗೆ ಬಂದಿದೆ. ಈ ಘಟನೆ ಸ್ಥಳೀಯರಲ್ಲಿ ಆಕ್ರೋಶ ಮತ್ತು ಆತಂಕಕ್ಕೆ ಕಾರಣವಾಗಿದ್ದು, ಆರೋಪಿಯ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಆರಂಭಿಸಿದ್ದಾರೆ.

ಮಾಹಿತಿಯ ಪ್ರಕಾರ, ಆರೋಪಿಯು ಬಾಲಕಿಯ ತಂದೆಯನ್ನು ಭೇಟಿಯಾಗುವ ನೆಪದಲ್ಲಿ ಮನೆಗೆ ಬಂದಿದ್ದಾನೆ. ಆದರೆ ಆ ವೇಳೆ ಬಾಲಕಿಯ ತಂದೆ ಮನೆಯಲ್ಲಿ ಇರಲಿಲ್ಲ. ತಾಯಿ ಮನೆಯೊಳಗೆ ಅಡುಗೆ ಕಾರ್ಯದಲ್ಲಿ ನಿರತರಾಗಿದ್ದ ಸಂದರ್ಭದಲ್ಲಿ, ಆರೋಪಿ ಮಗುವಿಗೆ ಬಿಸ್ಕತ್ ಕೊಡಿಸುವ ನೆಪದಲ್ಲಿ ಹತ್ತಿರದ ದಿನಸಿ ಅಂಗಡಿಗೆ ಕರೆದೊಯ್ದಿದ್ದಾನೆ.

**ಮಧ್ಯದಲ್ಲೇ ದೌರ್ಜನ್ಯ:** ಬಾಲಕಿಯನ್ನು ಅಂಗಡಿಗೆ ಕರೆದುಕೊಂಡು ಹೋಗುವ ಮಾರ್ಗ ಮಧ್ಯದಲ್ಲೇ ಆರೋಪಿಯು ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂದು ತಿಳಿದುಬಂದಿದೆ. ಕೃತ್ಯ ಎಸಗಿದ ನಂತರ ಏನೂ ಆಗದಂತೆ ನಡೆದುಕೊಂಡು, ಬಾಲಕಿಯನ್ನು ಮರಳಿ ಮನೆಗೆ ಕರೆತಂದು ಬಿಟ್ಟು ಪರಾರಿಯಾಗಿದ್ದಾನೆ.

ಮನೆಗೆ ಬಂದ ಬಳಿಕ ಬಾಲಕಿ ನಿರಂತರವಾಗಿ ನೋವಿನಿಂದ ಅಳುತ್ತಿದ್ದುದನ್ನು ಗಮನಿಸಿದ ತಾಯಿ ಅನುಮಾನಗೊಂಡು ಪರಿಶೀಲನೆ ನಡೆಸಿದಾಗ ರಕ್ತದ ಗುರುತುಗಳು ಕಂಡುಬಂದಿವೆ. ಏನಾಯಿತು ಎಂದು ಪ್ರಶ್ನಿಸಿದಾಗ ಬಾಲಕಿ ನಡೆದ ಘಟನೆ ಕುರಿತು ಹೇಳಿದ್ದು, ಕುಟುಂಬಸ್ಥರು ಬೆಚ್ಚಿಬಿದ್ದಿದ್ದಾರೆ.

ಘಟನೆಯ ಬಗ್ಗೆ ಪೊಲೀಸರಿಗೆ ದೂರು ನೀಡಲಾಗಿದ್ದು, ಆರೋಪಿಯ ವಿರುದ್ಧ ಭಾರತೀಯ ನ್ಯಾಯ ಸಂಹಿತೆ ಹಾಗೂ ಪೋಕ್ಸೊ ಕಾಯ್ದೆಯ ಸಂಬಂಧಿತ ವಿಧಿಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಆರೋಪಿಯನ್ನು ಪತ್ತೆಹಚ್ಚಲು ಪೊಲೀಸರು ಶೋಧ ಕಾರ್ಯಾಚರಣೆ ನಡೆಸುತ್ತಿದ್ದಾರೆ.

**ಮಹಿಳಾ ಆಯೋಗದ ಆಕ್ರೋಶ:** ಈ ಘಟನೆಗೆ ರಾಜ್ಯ ಮಹಿಳಾ ಆಯೋಗ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ಮಹಿಳಾ ಆಯೋಗದ ಅಧ್ಯಕ್ಷೆ ರಾಯಪತಿ ಶೈಲಜಾ ಅವರು ವಿಶಾಖಪಟ್ಟಣಂ ಪೊಲೀಸ್ ಆಯುಕ್ತರೊಂದಿಗೆ ದೂರವಾಣಿ ಮೂಲಕ ಮಾತನಾಡಿ, ಬಾಲಕಿಯ ಆರೋಗ್ಯ ಸ್ಥಿತಿ ಕುರಿತು ಮಾಹಿತಿ ಪಡೆದಿದ್ದಾರೆ. ಆರೋಪಿಗೆ ಕಠಿಣ ಶಿಕ್ಷೆ ವಿಧಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿರುವುದಾಗಿ ತಿಳಿದುಬಂದಿದೆ.

ಮನೆಯವರಂತೆ ಆಗಾಗ ಮನೆಗೆ ಬಂದು ಹೋಗುತ್ತಿದ್ದ ವ್ಯಕ್ತಿಯೇ ಇಂತಹ ಕೃತ್ಯ ಎಸಗಿರುವುದು ಕುಟುಂಬಕ್ಕೆ ಭಾರೀ ಆಘಾತ ತಂದಿದೆ. ಚಿಕ್ಕ ಮಕ್ಕಳಿಗೆ ಮನೆಯಲ್ಲಿಯೂ ಸುರಕ್ಷತೆ ಇಲ್ಲದಂತಾಗಿರುವ ಪರಿಸ್ಥಿತಿ ಸಮಾಜದಲ್ಲಿ ಆತಂಕ ಮೂಡಿಸಿದೆ. ಈ ಘಟನೆ ಮಕ್ಕಳ ಸುರಕ್ಷತೆ ಹಾಗೂ ವಿಶ್ವಾಸದ ದುರುಪಯೋಗದ ಬಗ್ಗೆ ಗಂಭೀರ ಚರ್ಚೆಗೆ ಕಾರಣವಾಗಿದೆ.

ಸದ್ಯ ಬಾಲಕಿಗೆ ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತಿದ್ದು, ಪೊಲೀಸರು ಪ್ರಕರಣದ ತನಿಖೆಯನ್ನು ಮುಂದುವ–ರಿಸಿದ್ದಾರೆ.




**ಯಶವಂತಪುರ:** ಕ್ಷೇತ್ರ ವ್ಯಾಪ್ತಿಯ ಕೆಂಗಲ್ ಹನುಮಂತಯ್ಯ ವಾರ್ಡ್‌ನ ಕೆಂಗೇರಿ ಉಪನಗರದಲ್ಲಿ ಜಿ.ಬಿ.ಎ ವತಿಯಿಂದ ಎಲ್.ಇ.ಡಿ ವಿದ್ಯುತ್ ದೀಪ ಅಳವಡಿಸುವ ಕಾರ್ಯಕ್ಕೆ ಶಾಸಕ ಎಸ್.ಟಿ ಸೋಮಶೇಖರ್ ಚಾಲನೆ ನೀಡಿದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.